♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

ASK ಮೈಸೂರು

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 06 | ಸಂಚಿಕೆ Issue 310 | ಭಾನುವಾರ Sunday | 31-03-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಬಾಲಕಿಯ ಸಾಮೂಹಿಕ ಅತ್ಯಾಚಾರ: ನಾಲ್ವರ ಬಂಧನ

■ ಕಾಯಕಯೋಗಿ ಸುದ್ದಿ

ಮಳವಳ್ಳಿ ಆಪ್ರಾಪ್ತ ಬಾಲಕಿಯನ್ನು ಬೆದರಿಸಿ ಸಾಮೂಹಿಕ ಅತ್ಯಾಚಾರ ಮಾಡಿದ ಒಬ್ಬ ಆಪ್ರಾಪ್ತ ಬಾಲಕ ಸೇರಿ ನಾಲ್ವರನ್ನು ಬಂಧಿಸಿರುವ ಘಟನೆ ಮಳವಳ್ಳಿ ಪಟ್ಟಣದ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಪ್ರಜ್ವಲ್ (21)
ಕಿಶೋರ(20),ಕಾರ್ತಿಕ(19)
ನಾಗೇಶ(17) ಬಂಧಿತ ಆರೋಪಿಗಳು.

ಆಪ್ರಾಪ್ತ ಬಾಲಕಿಯನ್ನು ದೂರವಾಣಿ ಮೂಲಕ ಕರೆಸಿಕೊಂಡು ನಿರ್ಜನ ಪ್ರದೇಶದಲ್ಲಿ ಸಾಮೂಹಿಕವಾಗಿ ಅತ್ಯಾಚಾರ ಮಾಡಿದ್ದಾರೆ ಎಂದು ದೂರಿನ ಮೇರೆಗೆ ಪೋಕ್ಸೋ ಪ್ರಕರಣ ದಾಖಲು ಮಾಡಿಕೊಂಡು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ನನ್ನದು ಗರ್ವ ಅಲ್ಲ, ಕನ್ನಡಿಗನ ಸಹಜ ಸ್ವಾಭಿಮಾನ

■ ಕಾಯಕಯೋಗಿ ಸುದ್ದಿ

ಬೆಂಗಳೂರು: ಜೆಡಿ(ಎಸ್) ವರಿಷ್ಠ ಹೆಚ್.ಡಿ.ದೇವೇಗೌಡರು ನನ್ನ ಗರ್ವಭಂಗ ಮಾಡುತ್ತೇನೆಂದು ಶಪಥ ಮಾಡಿದ್ದಾರೆ. ನನ್ನದು ಗರ್ವವೂ ಅಲ್ಲ, ಅಹಂಕಾರವೂ ಅಲ್ಲ. ನನ್ನದು ಕನ್ನಡಿಗರ ರಕ್ತದ ಕಣಕಣದಲ್ಲಿರುವ ಸ್ವಾಭಿಮಾನ, ಕನ್ನಡ-ಕನ್ನಡಿಗ-ಕರ್ನಾಟಕದ ರಕ್ಷಣೆಗಾಗಿ ತಲೆ ಎತ್ತಿ ಎದೆಯುಬ್ಬಿಸಿ ಪ್ರಶ್ನಿಸುವ ಮತ್ತು ಹೋರಾಟ ನಡೆಸುವ ಸ್ವಾಭಿಮಾನ ಎನ್ನುವುದನ್ನು ಅತ್ಯಂತ ವಿನಯಪೂರ್ವಕವಾಗಿ ಅವರ ಗಮನಕ್ಕೆ ತರಬಯಸುತ್ತೇನೆ.

ಸನ್ಮಾನ್ಯ ದೇವೇಗೌಡರೇ, ವೈಯಕ್ತಿಕ ಇಲ್ಲವೆ ರಾಜಕೀಯ ಲಾಭಕ್ಕಾಗಿ ನಾನು ಯಾರ ಜೊತೆಯಲ್ಲಿಯೂ ರಾಜಿ ಮಾಡಿಕೊಳ್ಳಲಾರೆ. ಅಂತಹ ಪರಿಸ್ಥಿತಿ ಬಂದೊದಗಿದರೆ ರಾಜಕೀಯವಾಗಿ ನಿವೃತ್ತಿಯಾಗುತ್ತೇನೆ ವಿನಃ ಕರ್ನಾಟಕದ ಹಿತಾಸಕ್ತಿಯ ವಿರೋಧಿಗಳ ಜೊತೆಯಲ್ಲಿ ನಿಮ್ಮಂತೆ ಹೊಂದಾಣಿಕೆ ಮಾಡಿಕೊಳ್ಳಲಾರೆ.

ದೇವೇಗೌಡರ ಜೊತೆ ರಾಜಕೀಯವಾಗಿ ನನಗೆ ಭಿನ್ನಾಭಿಪ್ರಾಯವಿದ್ದರೂ. ನಮ್ಮ ನೆಲ, ಜಲ ಮತ್ತು ಭಾಷೆಯ ರಕ್ಷಣೆಯ ಬಗೆಗಿನ ಅವರ ನಿಲುವಿನ ಬಗ್ಗೆ ಗೌರವ ಇತ್ತು. ಆದರೆ ಕಳೆದ ಹತ್ತು ವರ್ಷಗಳ ಅಧಿಕಾರಾವಧಿಯಲ್ಲಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಹೆಜ್ಜೆಹೆಜ್ಜೆಗೂ ಕರ್ನಾಟಕದ ಹಿತಾಸಕ್ತಿಯ ವಿರುದ್ಧವೇ ಕೆಲಸ ಮಾಡಿದೆ. ನಾಡಧ್ವಜಕ್ಕೆ ವಿರೋಧ, ಹಿಂದಿ ಹೇರಿಕೆ, ಕಾವೇರಿ, ಕೃಷ್ಣ, ಮಹದಾಯಿ ಜಲವಿವಾದಗಳಲ್ಲಿ ಅನ್ಯಾಯ, ಕೇಂದ್ರ ಸ್ವಾಮ್ಯದ ಸಂಸ್ಥೆಗಳಲ್ಲಿ ಕನ್ನಡಿಗ ಯುವಜನರಿಗೆ ವಂಚನೆ . ಹೀಗೆ ಕೇಂದ್ರದ ಬಿಜೆಪಿ ಸರ್ಕಾರ ಕರ್ನಾಟಕಕ್ಕೆ ದ್ರೋಹ ಎಸಗುತ್ತಾ ಬಂದಿದೆ. ಹೀಗಿದ್ದರೂ "ದೇಶದ ಎಲ್ಲ ಸಮಸ್ಯೆಗಳಿಗೆ ಮೋದಿ ಮತ್ತು ಶಾ ಬಳಿ ಪರಿಹಾರ ಇದೆ" ಎಂದು ಹೇಳುವಾಗ ಕನಿಷ್ಠ ನಿಮ್ಮ ಆತ್ಮಸಾಕ್ಷಿಯಾದರೂ ನಿಮ್ಮನ್ನು ಚುಚ್ಚಲಿಲ್ಲವೇ?



ನರೇಂದ್ರ ಮೋದಿ ನೇತೃತ್ವದ ಕೇಂದ್ರದ ಬಿಜೆಪಿ ಸರ್ಕಾರ ತೆರಿಗೆ ಹಂಚಿಕೆಯಲ್ಲಿ ಮಾಡಿರುವ ಅನ್ಯಾಯಕ್ಕೆ ಕ್ಷಮೆಯೇ ಇಲ್ಲ. ತೆರಿಗೆ ರೂಪದಲ್ಲಿ ಕೇಂದ್ರ ಸರ್ಕಾರದ ಖಜಾನೆಗೆ ಸಂದಾಯವಾಗುವ ಕನ್ನಡಿಗರ ಒಂದು ರೂಪಾಯಿಗೆ ಪ್ರತಿಯಾಗಿ ಕೇವಲ ಹದಿಮೂರು ಪೈಸೆಯಷ್ಟು ಹಣ ಮಾತ್ರ ಕರ್ನಾಟಕಕ್ಕೆ ವಾಪಸು ಬರುತ್ತಿದೆ. ತಮಿಳುನಾಡು, ಕೇರಳ, ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಪಶ್ಚಿಮ ಬಂಗಾಳ ಮೊದಲಾದ ರಾಜ್ಯಗಳ ಪ್ರಾದೇಶಿಕ ಪಕ್ಷಗಳು ಕೂಡಾ ಕೇಂದ್ರ ಸರ್ಕಾರದ ಅನ್ಯಾಯವನ್ನು ಕೂಗಿ ಕೂಗಿ ಹೇಳುತ್ತಿವೆ. ಆದರೆ ಕರ್ನಾಟಕದ ಪ್ರಾದೇಶಿಕ ಪಕ್ಷವಾದ ಜೆಡಿಎಸ್ ಮಾತ್ರ ನಮ್ಮ ನೆಲ-ಜಲ-ಭಾಷೆಯ ವಿರೋಧಿಗಳ ಜೊತೆಯಲ್ಲಿ ರಾಜಿ ಮಾಡಿಕೊಂಡು ಕನ್ನಡಿಗರಿಗೆ ದ್ರೋಹ ಎಸಗಿದೆ..

ಸನ್ಮಾನ್ಯ ದೇವೇಗೌಡರೇ, ಎಪ್ಪತ್ತು ವರ್ಷಗಳ ಕಾಲ ರಾಜಕೀಯದಲ್ಲಿದ್ದು ಕನ್ನಡಿಗರ ಪ್ರೀತಿ-ಅಭಿಮಾನವನ್ನು ಉಂಡು ಬೆಳೆದ ನೀವು "ನಾವು ಪ್ರಧಾನಿ ನರೇಂದ್ರ ಮೋದಿಯವರ ಹೆಸರಿನಲ್ಲಿಯೇ ಜುನಾವಣೆ ನಡೆಸುತ್ತೇವೆ" ಎಂಬ ಶರಣಾಗತಿಯ ಹೇಳಿಕೆಯನ್ನು ನೀಡುವಾಗ ಕನಿಷ್ಠ ನಿಮ್ಮ ಆತ್ಮಾಭಿಮಾನವೂ ಕುಟುಕಲಿಲ್ಲವೇ? ಕನ್ನಡ-ಕರ್ನಾಟಕ ವಿರೋಧಿ ನಾಯಕನಿಗೆ ಈ ರೀತಿ ಶರಣಾಗುವುದು ಸಮಸ್ತ ಕನ್ನಡಿಗರಿಗೆ ಮಾಡುವ ದ್ರೋಹ ಎಂದು ನಿಮಗೆ ಅನಿಸಲಿಲ್ಲವೇ? ನಿಮ್ಮೊಳಗಿನ ರಾಜಕೀಯ ನಾಯಕ ಅಷ್ಟೊಂದು ದುರ್ಬಲ ಅಸಹಾಯಕ ನಾಗಿ ಹೋದನೇ?

ತಮ್ಮ ರಾಜಕೀಯ ಜೀವನದುದ್ದಕ್ಕೂ ಪ್ರಾದೇಶಿಕ ಆಶೋತ್ತರಗಳನ್ನು ಪ್ರತಿಪಾದಿಸಿ ಕೊಂಡು ಕೇಂದ್ರದ ಅಧಿಪತ್ಯವನ್ನು ಪ್ರಶ್ನಿಸುತ್ತಾ ಬಂದ ದೇವೇಗೌಡರು ಈ ಇಳವಯಸ್ಸಿನಲ್ಲಿ ಈ ರೀತಿಯ ರಾಜಕೀಯ ರಾಜಿ ಮಾಡಿಕೊಳ್ಳುವಂತೆ ಮಾಡಿದ ಶಕ್ತಿ ಮತ್ತು ವ್ಯಕ್ತಿ ಯಾರೇ ಇರಬಹುದು, ಆದರೆ ದೇವೇಗೌಡರು, ಕೇವಲ ರಾಜಕೀಯ ಲಾಭಕ್ಕಾಗಿ ಮೈತ್ರಿ ಮಾಡಿಕೊಂಡು ಸಮಸ್ತ ಆರುವರೆ ಕೋಟಿ ಕನ್ನಡಿಗರು ತಲೆತಗ್ಗಿಸುವಂತೆ ಮಾಡಿದ್ದಾರೆ. ಈ ದ್ರೋಹಕ್ಕಾಗಿ ದೇವೇಗೌಡರು ಮತ್ತು ಅವರ ಪಕ್ಷ ಭಾರಿ ಬೆಲೆ ತೆರಲಿರುವುದು ಖಚಿತ.

ದಾಖಲೆ ಇಲ್ಲದೆ ಸಾಗಿಸಲಾಗುತ್ತಿದ್ದ 2000 ಸೀರೆ, ವಾಹನ ವಶಕ್ಕೆ



■ ಕಾಯಕಯೋಗಿ ಸುದ್ದಿ

ಶ್ರೀರಂಗಪಟ್ಟಣ: ದಾಖಲೆ ಇಲ್ಲದೆ ಸಾಗಿಸಲಾಗುತ್ತಿದ್ದ 2000 ಸೀರೆ, ವಾಹನ ಸೇರಿದಂತೆ ಚಾಲಕನನ್ನು ಪಟ್ಟಣ ಪೋಲೀಸರು ಬಂಧಿಸಿ ವಶಕ್ಕೆ ಪಡೆದುಕೊಂಡಿದ್ದಾರೆ.

ಮೈಸೂರಿನಿಂದ ಬೆಂಗಳೂರು ಕಡೆ ಸಾಗುತ್ತಿದ್ದ ಟಿಂಪೋ ಅನ್ನು ತಾಲ್ಲೂಕು ಗಡಿ ನಗುವನಹಳ್ಳಿ – ಕಳ್ಳಿವಾಡಿ ಮದ್ಯೆ ಇರುವ ಚೆಕ್ ಪೋಸ್ಟ್ ಬಳಿ ಪರಿಶೀಲಿಸಲಾಗಿ ಪ್ರಕರಣ ಬೆಳಕಿಗೆ ಬಂದಿದೆ.

ಸಿಪಿಐ ಬಿ.ಜಿ.ಕುಮಾರ್ ಮತ್ತು ಸಿಬ್ಬಂದಿ ನೇತೃತ್ವದಲ್ಲಿ ತಪಾಸಣೆ ನಡೆಸಲಾಗಿದ್ದು, ಸೀರೆಗಳಿಗೆ ಯಾವುದೇ ದಾಖಲೆಗಳು ಲಭ್ಯವಾಗಿಲ್ಲ. ಸೀರೆ, ವಾಹನ ಹಾಗೂ ಚಾಲಕನನ್ನು ವಶಕ್ಕೆ ಪಡೆಯಲಾಗಿದ್ದು, ಈ ಸಂಬಂಧ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ಕೆ.ಕೆ.ಡ್ಯಾಂ ಬಳಿ ಅರಣ್ಯಕ್ಕೆ ಬೆಂಕಿ: ಅಪಾರ ನಷ್ಟ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಬೈಲೂರು ವಲಯ ವ್ಯಾಪ್ತಿಯ ಕೆ.ಕೆ.ಡ್ಯಾಂ ಬಳಿ ಅರಣ್ಯಕ್ಕೆ ಬೆಂಕಿ ಬಿದ್ದು ಅಪಾರ ಪ್ರಮಾಣದ ಅರಣ್ಯ ನಾಶವಾಗಿದೆ.

ಶನಿವಾರ ಬೆಳಗ್ಗೆ ಗಸ್ತಿನಲ್ಲಿದ್ದ ಅರಣ್ಯ ಇಲಾಖೆ ಸಿಬ್ಬಂದಿಗೆ ಬೈಲೂರು ವಲಯದ ಕೆ.ಕೆ.ಡ್ಯಾಂ ಬಳಿ ಹೊಗೆ ಕಾಣಿಸಿಕೊಂಡಿದೆ. ಕೂಡಲೇ ಸಿಬ್ಬಂದಿ ಸ್ಥಳಕ್ಕೆ ತೆರಳಿ ಬೆಂಕಿ ನಂದಿಸಲು ಯತ್ನಿಸಿದ್ದಾರೆ. ಈ ವೇಳೆ ಮತ್ತೊಂದು ಕಡೆ ಬೆಂಕಿ ಕಾಣಿಸಿಕೊಂಡಿದ್ದು 60ಕ್ಕೂ ಹೆಚ್ಚು ಸಿಬ್ಬಂದಿ ಬೆಂಕಿ ನಂದಿಸುವಲ್ಲಿ ಕಾರ್ಯ ಪ್ರವೃತ್ತರಾಗಿದ್ದಾರೆ.

ಜೋರಾದ ಗಾಳಿ ಇರುವುದರಿಂದ ಬೆಂಕಿಯು ಕೆನ್ನಾಲಿ ತನ್ನ ವ್ಯಾಪ್ತಿಯನ್ನು ವಿಸ್ತರಿಸುತ್ತಿದ್ದು ಅರಣ್ಯ ಇಲಾಖೆ ಸಿಬ್ಬಂದಿ ಬೆಂಕಿಯನ್ನು ನಂದಿಸಲು ಹರಸಾಹಸಪಡುತ್ತಿದ್ದಾರೆ. ಬೆಂಕಿಯ ಕೆನ್ನಾಲಿಗೆಗೆ ಕುರುಚಲು ಗಿಡ, ಹುಲ್ಲು ಜಾತಿಯ ಗಿಡಗಳು ಸಂಪೂರ್ಣ ನಾಶವಾಗಿದೆ. ಈ ಭಾಗದಲ್ಲಿ ಹೆಜ್ಜಾಗಿ ಹುಲ್ಲಿನ ಜಾತಿಯ



ಗಿಡಗಳಿದ್ದು ಬೇಸಿಗೆ ಹಿನ್ನೆಲೆಯಲ್ಲಿ ಸಂಪೂರ್ಣವಾಗಿ ಒಣಗಿವೆ. ಇದರಿಂದಾಗಿ ಬೆಂಕಿ ಬಿದ್ದ ಸ್ಥಳದಿಂದ ವೇಗವಾಗಿ ಬೆಂಕಿ ಹರಡುತ್ತಿದೆ. ಟವರ್‌ಗಳ ಮೂಲಕ ಸಿಬ್ಬಂದಿ ಬೆಂಕಿ ಕಾಣಿಸಿಕೊಳ್ಳುವ ಕಡೆಗಳಿಗೆ ತೆರಳಿ ಬೆಂಕಿ ನಂದಿಸಲು ಮುಂದಾಗಿದ್ದಾರೆ.

ಕಡಿಗೇಡಿಗಳಿಂದ ಕೃತ್ಯ : ಬೈಲೂರು ವಲಯ ವ್ಯಾಪ್ತಿಯ ಕೆ.ಕೆ.ಡ್ಯಾಂ ಬಳಿ ಅರಣ್ಯ ಪ್ರದೇಶಕ್ಕೆ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದಾರೆ ಎಂದು ಹೇಳಲಾಗುತ್ತಿದೆ. ಈ ಹಿಂದೆಯೂ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯ ಪುಣಜನೂರು, ಯಳಂದೂರು ಬಲಯುಗಳಲ್ಲೂ ಅರಣ್ಯಕ್ಕೆ ಬೆಂಕಿ ಬಿದ್ದು ಅಪಾರ ಪ್ರಮಾಣದ ಅರಣ್ಯ ನಾಶವಾಗಿತ್ತು. ಈಗಲೂ ಇದು ಮುಂದುವರಿದಿದ್ದು ಈಗಾಗಲೇ ಅರಣ್ಯ ಇಲಾಖೆಯ ಸಿಬ್ಬಂದಿ ಬೆಂಕಿ ನಂದಿಸಲು ಮುಂದಾಗಿದ್ದು ಬೆಂಕಿ ಹಚ್ಚಿರುವವರನ್ನು ಪತ್ತೆ ಹಚ್ಚುವ ಕಾರ್ಯದಲ್ಲಿಯೂ ತೊಡಗಿದ್ದಾರೆ.

ಡ್ರೋಣ್ ಮೂಲಕ ಕಾರ್ಯಾಚರಣೆ : ಕೆ.ಕೆ.ಡ್ಯಾಂ ಅರಣ್ಯ ವ್ಯಾಪ್ತಿಯಲ್ಲಿ ಬೆಂಕಿ ಕಾಣಿಸಿಕೊಂಡಿರುವ ಕಡೆಗಳಿಗೆ ನಿಗಾ ಇಡಲು ಡ್ರೋಣ್ ಮೂಲಕ ಕಾರ್ಯಾಚರಣೆ ನಡೆಸಲಾಗುತ್ತಿದೆ. ಬೆಂಕಿ ಹರಡುವ ಕಡೆಗಳಿಗೆ ಅರಣ್ಯ ಇಲಾಖೆ ಸಿಬ್ಬಂದಿ ಡ್ರೋಣ್ ಸಹಾಯದಿಂದ ಪರಿಶೀಲಿಸುತ್ತಿದ್ದಾರೆ. ಈಗಾಗಲೇ ಕೆಲವು ಕಡೆಗಳಲ್ಲಿ ಬೆಂಕಿ ಹತೋಟಿಗೆ ಬಂದಿದೆ. ಉಳಿದಂತೆ ಕೆಲವು ಕಡೆಗಳಲ್ಲಿ ಬೆಂಕಿಯು ಬಹಳ ವೇಗವಾಗಿ ಹರಡುತ್ತಿದೆ. ಬೈಲೂರು ವಲಯ ವ್ಯಾಪ್ತಿಯ ಕೆ.ಕೆ.ಡ್ಯಾಂ ಬಳಿ ಅರಣ್ಯಕ್ಕೆ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದು ಬೆಂಕಿ ನಂದಿಸುವ ಕಾರ್ಯಾಚರಣೆ ಮುಂದುವರಿದಿದೆ. ಎಷ್ಟು ಎಕರೆ ಪ್ರದೇಶ ನಾಶವಾಗಿದೆ ಎಂಬುದನ್ನು ನಿಖರವಾಗಿ ಹೇಳಲು ಸಾಧ್ಯವಿಲ್ಲ. ಈಗಾಗಲೇ ಸ್ಥಳದಲ್ಲಿ ಸಿಬ್ಬಂದಿ ಬೀಡು ಬಿಟ್ಟು ಬೆಂಕಿ ನಂದಿಸುವ ಪ್ರಕ್ರಿಯೆಯಲ್ಲಿ ತೊಡಗಿದ್ದಾರೆ ಎಂದು ಬಿಆರ್‌ಟಿ ಹುಲಿ ಯೋಜನೆ ನಿರ್ದೇಶಕಿ ದೀಪ್ ಜಿ.ಕಂಟ್ರಾಕ್ಟರ್ ಪತ್ರಿಕೆಗೆ ಮಾಹಿತಿ ನೀಡಿದರು.

ನಾಳೆ ಬಿಳಿಗೆರೆ ಗ್ರಾಮಕ್ಕೆ ಸಿಎಂ ಸಿದ್ದರಾಮಯ್ಯ ಆಗಮನ

■ ಕಾಯಕಯೋಗಿ ಸುದ್ದಿ

ನಂಜನಗೂಡು: ಏ.1 ರಂದು ಸೋಮವಾರ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಂಜನಗೂಡು ತಾಲೂಕಿನ ಬಿಳಿಗೆರೆ ಗ್ರಾಮಕ್ಕೆ ಆಗಮಿಸಲಿದ್ದಾರೆ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಸಿ ಬಸವರಾಜು ಹೇಳಿದರು.

ನಂಜನಗೂಡು ತಾಲ್ಲೂಕಿನ ಹದಿನಾರು ಗ್ರಾಮದಲ್ಲಿ ಮಾತನಾಡಿದ ಅವರು, ಚಾಮರಾಜನಗರ ಲೋಕಸಭಾ ಕ್ಷೇತ್ರದ ಜುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸುನಿಲ್ ಬೋಸ್ ಅವರು ಸ್ಪರ್ಧಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ನಂಜನಗೂಡು ತಾಲ್ಲೂಕಿನ ಬಿಳಿಗೆರೆ ಗ್ರಾಮದ ಹೊರವಲಯದಲ್ಲಿ ಕಾರ್ಯಕರ್ತರ ಸಭೆಯನ್ನು ನಡೆಸಲಾಗುತ್ತಿದೆ. ಹಾಗಾಗಿ ಏ.1 ರಂದು ಸೋಮವಾರ ಬೆಳಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆಗಮಿಸಲಿದ್ದಾರೆ. ಇವರೊಂದಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಹೆಚ್ ಸಿ ಮಹದೇವಪ್ಪ, ಕೆ.ವೆಂಕಟೇಶ್, ಆಶ್ರಯ ಸಮಿತಿಯ ಅಧ್ಯಕ್ಷ ಡಾ. ಯತೀಂದ್ರ ಸಿದ್ದರಾಮಯ್ಯ, ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್, ಸೇರಿದಂತೆ ಶಾಸಕರು, ಸಚಿವರು ಭಾಗವಹಿಸಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಭಾಗವಹಿಸಬೇಕು ಎಂದು ತಿಳಿಸಿದರು.

ತುಮಕೂರು: ಏ.1ಕ್ಕೆ ಶಿವಕುಮಾರ ಸ್ವಾಮೀಜಿ ಜಯಂತಿ

■ ಕಾಯಕಯೋಗಿ ಸುದ್ದಿ

ತುಮಕೂರು: ಲಿಂಗೈಕ್ಯ ಶಿವಕುಮಾರ ಸ್ವಾಮೀಜಿ 117ನೇ ಜನ್ಮ ದಿನೋತ್ಸವ ಹಾಗೂ ಗುರುವಂದನಾ ಕಾರ್ಯಕ್ರಮ ಏ. 1ರಂದು ಸಿದ್ಧಗಂಗಾ ಮಠದಲ್ಲಿ ನಡೆಯಲಿದೆ.



ಪತಂಜಲಿ ಯೋಗ ಗುರು ಸ್ವಾಮಿ ರಾಮದೇವ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಗುರುವಂದನಾ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಸಿದ್ಧಗಂಗಾ ಮಠದ ಆಡಳಿತಾಧಿಕಾರಿ ಎಸ್.ವಿಶ್ವಪ್ರಾಣೇಶ್ವಯ್ಯ ಪತ್ರಿಕಾಗೋಷ್ಠಿಯಲ್ಲಿ ಶುಕ್ರವಾರ ತಿಳಿಸಿದರು.

ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ನೀತಿ ಸಂಹಿತಿ ಜಾರಿಯಲ್ಲಿ ಇರುವುದರಿಂದ ರಾಜಕೀಯ ಪಕ್ಷಗಳ ಮುಖಂಡರು, ಇತರರ ಪ್ರಮುಖರನ್ನು ಸಮಾರಂಭಕ್ಕೆ ಆಹ್ವಾನಿಸಿಲ್ಲ. ವಿವಿಧ ಮಠಾಧೀಶರ ಸಮ್ಮುಖದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಯಾರೇ ಬಂದರೂ ಭಕ್ತರಾಗಿ ಭಾಗವಹಿಸಬಹುದು ಎಂದು ಅವರು ಅವರು ಹೇಳಿದರು.

ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸಿದ್ಧಗಂಗಾ ಮಠಾಧ್ಯಕ್ಷ ಸಿದ್ಧಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಮುಂಡರಗಿ ಅನ್ನದಾನೇಶ್ವರ ಮಠದ ಅನ್ನದಾನೇಶ್ವರ ಸ್ವಾಮೀಜಿ, ಧಾರವಾಡ ಮುರುಘಾ ಮಠದ ಮಲ್ಲಿಕಾರ್ಜುನ ಸ್ವಾಮೀಜಿ, ಗದಗ ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯ ಅಜ್ಜ, ಸಿದ್ಧಗಂಗಾ ಮಠದ ಉತ್ತರಾಧಿಕಾರಿ ಶಿವಸಿದ್ಧೇಶ್ವರ ಸ್ವಾಮೀಜಿ ಭಾಗವಹಿಸುವರು ಎಂದರು.



ಮಠದ ಸಹಾಯಕ ಆಡಳಿತಾಧಿಕಾರಿ ಮಲ್ಲಿಕಾರ್ಜುನಯ್ಯ, ಶಿವಕುಮಾರಯ್ಯ ಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ದಾಸೋಹ: ಸೋಮವಾರ ಇಡೀ ದಿನ ಮಠದಲ್ಲಿ ದಾಸೋಹ ನಡೆಯಲಿದೆ. ಬೆಳಗ್ಗೆ ತಿಂಡಿ, ಮಧ್ಯಾಹ್ನದಿಂದ ರಾತ್ರಿ ಪರ್ಯಂತ ಊಟದ ವ್ಯವಸ್ಥೆ ಮಾಡಲಾಗಿದೆ. ಈಗಾಗಲೇ ಸಿಹಿ ಬೂಂದಿ ತಯಾರಿಕೆ ಕಾರ್ಯ ನಡೆಯುತ್ತಿದೆ.

ಕಾವೇರಿ ಉಳಿವಿಗಾಗಿ ಕುಮಾರಣ್ಣನ ನಾಯಕತ್ವ ಅತ್ಯಗತ್ಯವಿದೆ: ಪ್ರತಾಪ್ ಸಿಂಹ

■ ಕಾಯಕಯೋಗಿ ಸುದ್ದಿ

ನಾಗಮಂಗಲ: ದೇಶದ ಉಳಿವಿಗೆ ಪ್ರಧಾನಿ ಮೋದಿರವರು ಎಷ್ಟು ಅತ್ಯಗತ್ಯವೋ ಅದೇ ರೀತಿ ನಮ್ಮ ಕಾವೇರಿಯ ಉಳಿವಿಗಾಗಿ ರಾಷ್ಟ್ರ ಮಟ್ಟದಲ್ಲಿ ರಾಜ್ಯದ ಧ್ವನಿಯಾಗಬಲ್ಲ ಕುಮಾರಣ್ಣನ ನಾಯಕತ್ವದ ಅಗತ್ಯವಿದೆ ಎಂದು ಸಂಸದ ಪ್ರತಾಪ್ ಸಿಂಹ ತಿಳಿಸಿದರು.

ಏ.26 ರಂದು ನಡೆಯುವ ಲೋಕಸಭಾ ಚುನಾವಣೆ ಸಂಬಧ ನಾಗಮಂಗಲ ಪಟ್ಟಣದ ಶ್ರೀ ಬಡಗೂಡಮ್ಮ ದೇವಾಲಯದ ಆವರಣದಲ್ಲಿ ಆಯೋಜಿಸಲಾಗಿದ್ದ ಜೆಡಿಎಸ್-ಬಿಜೆಪಿ ಕಾರ್ಯಕರ್ತರ ಸಮನ್ವಯ ಸಭೆಯಲ್ಲಿ ಭಾಗವಹಿಸಿದ್ದ ಸಂಸದರು ಮಾತನಾಡಿದರು.

ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳ ಮುಖಂಡರುಗಳ ಮನಸ್ಸಿನಲ್ಲಿ ಸಾಮರಸ್ಯದ ಸಮನ್ವಯತೆಯ ಇಚ್ಚಾಸಕ್ತಿ ಅನಾವರಣ ವಾಗಿದ್ದೇ ಆದರೆ ಗೆಲುವು ನಿಶ್ಚಿತ ಎಂಬುದಕ್ಕೆ ಈ ವೇದಿಕೆಯೇ ಸಾಕ್ಷಿ. ಈ ಎರಡು ಪಕ್ಷಗಳ ಸಮನ್ವತೆಯ ಪ್ರಯತ್ನದ ಪ್ರತಿಫಲವಾಗಿ ಐತಿಹಾಸಿಕ ಗೆಲುವು ಸಾಧಿಸುವ ಕುಮಾರಣ್ಣ ಕೇಂದ್ರ ಸಚಿವರಾಗುತ್ತಾರೆ. ಅಂಬರೀಶ್ ಅಣ್ಣನ ನಂತರ ಕೇಂದ್ರ ಸಚಿವ ಸ್ಥಾನ ಮಂಡ್ಯಕ್ಕೆ ಸಿಕ್ಕಿಲ್ಲ. ಈ ಬಾರಿ ಒಳ್ಳೆಯ ಖಾತೆ ಪಡೆದು ಸಚಿವರಾಗುವ ಮೂಲಕ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಆಗಬಹುದಿರುವ ಹಲವು ವಿಚಾರಗಳ ಸ್ಪಂದನೆಯ ಜೊತೆಗೆ ಕಾವೇರಿಯ ಉಳಿವಿಗಾಗಿ ಒಬ್ಬ ಉತ್ತಮ ಕಾವಲುಗಾರ ಕುಮಾರಣ್ಣ ಆಗುತ್ತಾರೆ. ನೀರಾವರಿ ವಿಷಯದ

website: www.kayakayogi.com

ಕಾಯಕ ಯೋಗಿ

KAYAKA YOGI - Regional Daily

ಪುಟ–2 | 31–03–2024

ಮಂಡ್ಯ

ಶ್ರೀ ಕಾಳೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ

■ ಕಾಯಕಯೋಗಿ ಸುದ್ದಿ

ಮಳವಳ್ಳಿ: ತಾಲ್ಲೂಕಿನ ಹಲಗೂರು ಸಮೀಪವಿರುವ ಯತ್ತಂಬಾಡಿ ಗ್ರಾಮದ ಕಾಳೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವ ಅದ್ಧೂರಿಯಾಗಿ ನಡೆಸಲಾಯಿತು.

ಸಾವಿರಾರು ಭಕ್ತರ ಸಮ್ಮುಖದಲ್ಲಿ ಮೂರು ದೇವತೆಗಳ ಕರಗ ಉತ್ಸವ ಮೂರ್ತಿ ಯನ್ನು ಪೂಜಾಕುಣಿತ ,ನಗಾರಿ ತಮಟೆಯೊಂದಿಗೆ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು.

ಈ ಬೀದಿಗಳಲ್ಲಿ ಪಾನಕ ಪಿತರಣೆ ಮಾಡಲಾಯಿತು.

ಈ ವೇಳೆ ಯತ್ತಂಬಾಡಿ ಗ್ರಾಮದ ಮುಖಂಡ ಕೃಷ್ಣಪ್ಪ ಮಾತನಾಡಿ ಮೂರು ದಿನಗಳ ಕಾಲ ನಡೆಯುವ ಜಾತ್ರೆಗೆ ಯತ್ತಂಬಾಡಿ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ಸಾವಿರಾರು ಭಕ್ತರು ಆಗಮಿಸಿ ದೇವರ ದರ್ಶನ ಪಡೆದುಕೊಂಡುಪೂಜೆ ಸಲ್ಲಿಸಿದರು.

ಜಾತ್ರೆಗೆ ಬಂದಿದ್ದ ಭಕ್ತಾದಿಗಳಿಗೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆ ಸೂಕ್ತ ಬಂದೋ ಬಸ್ತ್ ಏರ್ಪಡಿಸಲಾಗಿತ್ತು.



ಮಂಡ್ಯ ಜಿಲ್ಲೆಗೆ ಎಚ್‌ಡಿಕೆ ಗುರುತರ ಕೊಡುಗೆ ಏನು?

ಸಿದ್ದರಾಮಯ್ಯ ಒಕ್ಕಲಿಗರ ವಿರೋಧಿಯಲ್ಲ: ಮರಿತಿಬ್ಬೇಗೌಡ

■ ಕಾಯಕಯೋಗಿ ಸುದ್ದಿ

ಮಂಡ್ಯ: ಎಚ್.ಡಿ.ದೇವೇಗೌಡ ಅವರು ಪ್ರಧಾನಿ, ಮುಖ್ಯಮಂತ್ರಿ ಹಾಗೂ ಅವರ ಮಗ ಎಚ್.ಡಿ. ಕುಮಾರಸ್ವಾಮಿ ಎರಡು ಬಾರಿ ಮುಖ್ಯಮಂತ್ರಿಯಾಗಿ ಮಂಡ್ಯ ಜಿಲ್ಲೆಯ ಅಭಿವೃದ್ಧಿಗೆ ಗುರುತರವಾದ ಕೊಡುಗೆ ನೀಡಿಲ್ಲ ಎಂದು ಮಾಜಿ ಶಾಸಕ ಮರಿತಿಬ್ಬೇಗೌಡ ಆರೋಪಿಸಿದರು.

ಮಳವಳ್ಳಿ ಪಟ್ಟಣದ ಕಾಂಗ್ರೆಸ್ ನಿವೇಶನದಲ್ಲಿ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಶುಕ್ರವಾರ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಜಾತಿ ಜಾತಿ ಎತ್ತಿಕಟ್ಟುವ ಕೆಲಸವನ್ನು ಜಾ.ದಳ ಮತ್ತು ಬಿಜೆಪಿ ನಾಯಕರು ಮಾಡುತ್ತಿದ್ದಾರೆ. ಇದನ್ನು ಜನತೆ ಅರ್ಥ ಮಾಡಿಕೊಂಡು ತಾಲ್ಲೂಕಿನ ಅಭಿವೃದ್ಧಿಗೆ ಸದಾ ಶ್ರಮಿಸುತ್ತಿರುವ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಅವರ ಕೈ ಬಲಪಡಿಸಬೇಕು ಎಂದು ಹೇಳಿದರು.

ಒಕ್ಕಲಿಗ ಸಮುದಾಯದ ಯುವಕರಿಗೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ನರೇಂದ್ರಸ್ವಾಮಿ ಅವರು ಅನೇಕ ಸ್ಥಾನಮಾನ



ಕಲ್ಪಿಸಿದ್ದಾರೆ. ಅವರ ನೇರ ನಡೆ ಮಾತುಗಳು ಬೇಸರವಾಗಿರಬಹುದು. ಅವರು ಒಕ್ಕೂಟಿಗ ವಿರೋಧಿಯಾಗಿದ್ದರೆ 47 ಸಾವಿರ ಮತಗಳ ಅಂತರದಿಂದ ಗೆಲುತ್ತಿರಲಿಲ್ಲ, ಈಗ 8 ತಿಂಗಳಲ್ಲಿ 250 ಕೋಟಿ ಅನುದಾನ ತಂದಿದ್ದಾರೆ ಎಂದು ಶ್ಲಾಘಿಸಿದರು.

ಜಾ.ದಳದವರು ಬಿಜೆಪಿಯವರ ಜೊತೆ ಸಖ್ಯ ಮಾಡಿಕೊಂಡು ಲೋಕಸಭೆಯಲ್ಲಿ ಕೇವಲ ಮೂರು ಸೀಟು ತೆಗೆದುಕೊಂಡು ಬಂದಿದ್ದು, ಎಲ್ಲ ಕಡೆಯೂ ಅವರ ಮನೆಯವರೇ ನಿಂತಿದ್ದಾರೆ. ನಮಗೇನು ಬೇಸರವಿಲ್ಲ, ಇವತ್ತು ಮೇಕೆದಾಟು ಯೋಜನೆ ಬಗ್ಗೆ ಎಚ್.ಡಿ.ದೇವೇಗೌಡರು ಮಾತಾಡುವುದು ಏಕೆ ಎಂದರೆ ಅವರ ಅಳಿಯ ಡಾ.ಮಂಜುನಾಥ್ ಅವರು ಬೆಂಗಳೂರು ಗ್ರಾಮಾಂತರದಲ್ಲಿ ಸ್ಪರ್ಧೆ ಮಾಡಿದ್ದಾರೆ. ಇದೇ ಮೇಕೆದಾಟು ಯೋಜನೆಗಾಗಿ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ದೊಡ್ಡ ಚಳವಳಿ ಮಾಡಿದಾಗ ಇವರಿಂದ ಏನು ಆಗುತ್ತೆ ಎಂದು ಎಚ್.ಡಿ.ದೇವೇಗೌಡರು ಹಾಗೂ ಬಿಜೆಪಿ ಯವರು ವ್ಯಂಗ್ಯವಾಡಿದರು ಎಂದು ಕಿಡಿಕಾರಿದರು.

ಐದು ತಿಂಗಳಿಂದ ಮೋದಿ ಅವರ ಜೊತೆ ಇರುವ ಎಚ್.ಡಿದೇವೇಗೌಡರು ಪ್ರಧಾನಿಯವರಿಗೆ ಹೇಳಿ ನಿಮ್ಮ ಪಕ್ಷವನ್ನು ರಾಜ್ಯದಲ್ಲಿ ಗೆಲ್ಲಿಸಿಕೊಂಡು ಬರುವ ಮೇಕೆದಾಟು ಯೋಜನೆಗೆ ಮಂಜೂರಾತಿ ಕೊಡಿ ಎಂದು ಬರೆಸಿಕೊಂಡು ಬರಬೇಕಿತ್ತು. ಆದರೆ ಆ ಕೆಲಸ ಮಾಡಲಿಲ್ಲ ಎಂದು ಛೇಡಿಸಿದರು.

ಎಚ್.ಡಿ.ಕುಮಾರಸ್ವಾಮಿ ಅವರು ಅಭ್ಯರ್ಥಿಯಾದ ಮೇಲೆ ರಾಜ್ಯದ ನೀರಾವರಿ ಯೋಜನೆಗೆ ಯಾರು ಏನೂ ಮಾಡಿಲ್ಲ ನನ್ನನ್ನು ಗೆಲ್ಲಿಸಿ ಬರೆಸಿಕೊಂಡು ಬರುವೆ ಎಂದು, ಅವರ ತಂದೆಯವರು ಮಾಜಿ ಪ್ರಧಾನಿಯಾಗಿ 60 ವರ್ಷ ರಾಜಕಾರಣ ಮಾಡಿ ನೀರಾವರಿ ಯೋಜನೆಗೆ ಪರಿಹಾರ ತಂದು ಕೊಡದ ಇವರು ಗೊಗರೆದು ಮೂರು ಸೀಟು ತೆಗೆದುಕೊಂಡಿದ್ದಾರೆ ಎಂದು ವ್ಯಂಗ್ಯವಾಡಿದರು.

ಇವರ ಮನೆಗೆ ಅಧಿಕಾರ ಬಂದಾಗ ಒಬ್ಬ ಕಾರ್ಯಕರ್ತರಿಗೆ ಅಧಿಕಾರ ಕೊಡಲಿಲ್ಲ, ಈ ನಾಡಿನ ಜನರಿಗಾಗಲ್ಲ ಅವರು ಬಿಜೆಪಿ ಸೇರಿರುವುದು, ಪಕ್ಷಕ್ಕೋಸ್ಕರ ಅಲ್ಲ, ಅವರ ಮನೆಯ ಮಕ್ಕಳಿಗಾಗಿ ಎನ್ನುವುದನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕಿದೆ. ನನಗೆ ಆರೋಗ್ಯ ಸರಿಯಿಲ್ಲ ಎಂದು ನಾಟಕವಾಡುತ್ತಾರೆ. ಒಂದು ರೀತಿ ಗುಬ್ಬಿವೀರಣ್ಣಯ್ಯ ನಾಟಕ ಕಂಪನಿಕ್ಕಿಂತ ಹಳೆಯ ಕಂಪನಿ ಎಂದು ವ್ಯಂಗ್ಯವಾಡಿದರು.

ಚುನಾವಣೆ ಬಂದಾಗ ಆಸ್ಪತ್ರೆ ಸೇರುತ್ತಾರೆ

ಶ್ರೀರಂಗಪಟ್ಟಣ ಶಾಸಕ ರಮೇಶ್ ಬಂಡಿಸಿದ್ದೇಗೌಡ ಮಾತನಾಡಿ, ಚುನಾವಣೆ ಬಂತು ಅಂದರೆ ಸಾಕು ಎಚ್.ಡಿ.ಕುಮಾರಸ್ವಾಮಿ ಅವರು ಆಸ್ಪತ್ರೆ ಸೇರುತ್ತಾರೆ. ಹೃದಯ ಶಸ್ತಚಿಕಿತ್ಸೆಗೊಳಗಾಗಿ ಮೂರೇ ದಿನಕ್ಕೆ ಆಸ್ಪತ್ರೆಯಿಂದ ಹೊರಗೆ ಬಂದು ರಾಜ್ಯ ಸುತ್ತಾಡುತ್ತಾರೆ. ಅದು ಹೇಗೆ ಸಾಧ್ಯ ಎನ್ನುವುದೇ ನಮಗೆ ಅರ್ಥವಾಗುತ್ತಿಲ್ಲ ಎಂದು ಟೀಕಿಸಿದರು.

ಸಚಿವ ಚಲುವರಾಯಸ್ವಾಮಿ ಅವರಿಗೂ ಅದೇ ರೀತಿಯ ಹೃದಯ ಸಮಸ್ಯೆ ಇದೆ. ಅವರು ತಿಂಗಳುಗಟ್ಟಲೆ ಆಸ್ಪತ್ರೆಯಿಂದ ಹೊರಬಂದಿರಲಿಲ್ಲ, ಇದು ಯಾವ ರೀತಿಯ ಆಪರೇಷನ್ನೋ ಗೊತ್ತಿಲ್ಲ. ಇದು ಎಂಥ ಹೊಸ ಟೆಕ್ನಾಲಜಿ ಅಥವಾ ಟೆಕ್ನಿಕ್ ಅಂಥ ಗೊತ್ತಿಲ್ಲ ಎಂದು ವ್ಯಂಗ್ಯವಾಡಿದರು.

ಲೋಕಸಭಾ ಅಭ್ಯರ್ಥಿ ವೆಂಕಟರಮಣೇಗೌಡ(ಸ್ಟಾರ್ ಚಂದ್ರು) ಮಾತನಾಡಿ, ನನಗೊಂದು ಅವಕಾಶ ಮಾಡಿಕೊಡಿ. ನಾನು ನಿಮ್ಮ ಸೇವೆ ಮಾಡುವೆ, ನನಗೆ ರಾಜಕಾರಣ ಹೊಸದಲ್ಲ, ನಾನೂ ರೈತನ ಮಗನೇ ಎಂದು ಹೇಳಿದರು. ಇದೇ ವೇಳೆ ನೂತನವಾಗಿ ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ದೊಡ್ಡಯ್ಯ ಹಾಗೂ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಸಿ.ಪಿ.ರಾಜು ಅಧಿಕಾರ ಸ್ವೀಕಾರ ಮಾಡಿದರು.

ಶಾಸಕರಾದ ಪಿ.ರವಿಕುಮಾರ್, ಕೆ.ಎಂ.ಉದಯ್, ಮಧು ಜಿ.ಮಾದೇಗೌಡ, ದಿನೇಶ್ ಗೂಳಿಗೌಡ, ಮಾಜಿ ಶಾಸಕ ಬಿ.ರಾಮಕೃಷ್ಣ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಬಿ.ಎಸ್.ವಿಜಯ್, ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಚಿಕ್ಕಲಿಂಗಯ್ಯ, ಕುರುಬರ ಸಂಘದ ಜಿಲ್ಲಾ ಅಧ್ಯಕ್ಷ ಎಂ.ಎನ್.ಸುರೇಶ್, ಕಾಂಗ್ರೆಸ್ ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷ ಅಂಜನಾ ಶ್ರೀಕಾಂತ್, ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಎಂ.ಎನ್. ಚಿದಂಬರ್, ಮುಖಂಡರಾದ ಬಿ.ಆರ್. ರಾಮಚಂದ್ರ, ಡಾ.ಮೂರ್ತಿ, ಆರ್.ಎನ್.ಪಿಶ್ವಾಸ್, ವೆಂಕಟೇಗೌಡ, ಬಿ.ಪುಟ್ಟಬಸವಯ್ಯ, ಸುಷ್ಮಾ ರಾಜು, ಸುಜಾತಾ ಕೆ.ಎಂ.ಪುಟ್ಟು, ಸವಿತಾ, ದ್ಯಾವೇಗೌಡ, ಕುಂದೂರು ಪ್ರಕಾಶ್, ಪ್ರಮೀಳಾ, ಸಿ.ಎಂ.ದ್ಯಾವಪ್ಪ, ಸಿದ್ದೇಗೌಡ, ಜಯಣ್ಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ದೊಡ್ಡಯ್ಯ, ಸಿ.ಪಿ.ರಾಜು, ಕೆ.ಜೆ.ದೇವರಾಜು ಇತರರು ಭಾಗವಹಿಸಿದ್ದರು.

ಮಹಿಳೆ ಕೃಷಿಯಿಂದ ಕಕ್ಕೆವರೆಗೆ : ಮಂಜುಳ

■ ಕಾಯಕಯೋಗಿ ಸುದ್ದಿ

ಮಂಡ್ಯ: ಮಹಿಳೆ ಮಕ್ಕಳನ್ನು ಹೆರುವ ಯಂತ್ರವಲ್ಲ ಹಾಗೂ ಮನೆ ಕೆಲಸ ಅಡುಗೆ ಕೆಲಸಕ್ಕೆ ಸೀಮಿತವಾಗಿಲ್ಲದೆ ಇವಾಗ ಕೃಷಿಯಿಂದ ಕಕ್ಕೆವರೆಗೆ ಎಲ್ಲಾ ಕ್ಷೇತ್ರದಲ್ಲೂ ಪುರುಷರಿಗೆ ಕಡಿಮೆ ಇಲ್ಲದ ಹಾಗೆ ದುಡಿಯುತ್ತಿದ್ದಾಳೆ ಎಂದು ಬಾಲಕಿಯ ಬಾಲ ಮಂದಿರದ ಅಧೀಕ್ಷಕರಾದ ಮಂಜುಳಾ ಜಿ. ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬಾಲಕಿಯರ ಬಾಲ ಮಂದಿರ ಮಂಡ್ಯ ಇವರ ವತಿಯಿಂದ ಕಲ್ಲಳ್ಳಿ 14ನೇ ಕ್ರಾಸ್ ನಲ್ಲಿ ಬಾಲಕಿಯ ಬಾಲ ಮಂದಿರದಲ್ಲಿ ವಿಶ್ವ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದರು.

1975ರಲ್ಲಿ ಮೊದಲ ಬಾರಿಗೆ ವಿಶ್ವಸಂಸ್ಥೆ ಮಾರ್ಚ್ 8ರಂದು ಅಧಿಕೃತವಾಗಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಣೆಗೆ ತಂದಿತು

ಇಂದಿನ ದಿನದಲ್ಲಿ ಮಹಿಳೆ ಎಲ್ಲಾ ಕ್ಷೇತ್ರದಲ್ಲೂ ದುಡಿತಿದ್ದು ಪುರುಷರಿಗೆ ಸರಿಸಮಾನವಾಗಿ ದುಡಿತಿದ್ದಾಳೆ ಅವಳಿಗೆ ಸರಿಯಾದ ರೀತಿಯಲ್ಲಿ ವಿದ್ಯಾಭ್ಯಾಸ ಸಮಾನತೆ ನೀಡಿರುವುದರಿಂದ ಮಹಿಳೆ ಸಮಾಜದಲ್ಲಿ ಮುಂದೆ ಬರುವುದರಲ್ಲಿ ಯಾವುದೇ ಸಂಶಯವಿಲ್ಲ ಅವಳಿಗೆ



ಆತ್ಮಸ್ಥೈರ್ಯ ನೀಡುವುದರಿಂದ ತನ್ನ ಕುಟುಂಬ ನಿರ್ವಹಣೆ ಮಾಡುವುದು ಅವಳಿಗೆ ಸುಲಭವಾಗಿತ್ತದೆ ಹೆಣ್ಣು ಸಮಾಜದ ಕಣ್ಣು, ಬದುಕಿನಲ್ಲಿ ಎಲ್ಲಾ ಸವಾಲುಗಳನ್ನು ಎದುರಿಸಿ ನಿಲ್ಲುವ ಗಟ್ಟಿಗಿತ್ತಿ ಮಹಿಳೆ ಎಂದು ತಿಳಿಸಿದರು

ಇದೇ ಸಂದರ್ಭದಲ್ಲಿ ಮಹಿಳಾ ಸಿಬ್ಬಂದಿ ವರ್ಗದವರಿಗೆ ಆಟಗಳನ್ನು ಆಡಿಸಿ ಗೆದ್ದಂತ ಮಹಿಳೆಯರಿಗೆ ಬಹುಮಾನಗಳನ್ನು ವಿತರಿಸಲಾಯಿತು ಜೊತೆಗೆ ಸಾಂಸ್ಕೃತಿ ಕಾರ್ಯಕ್ರಮ ನಡೆಯಿತು ಇದೇ ಸಂದರ್ಭದಲ್ಲಿ ಗೃಹ ಪಾಲಕರಾದ ಪಾರ್ವತಮ್ಮ ಮಾತನಾಡುತ್ತಾ ಸ್ವಾತಂತ್ರ ಬಂದು 75 ವರ್ಷಗಳು ಆಯ್ತು ನಮ್ಮ ಮಹಿಳೆಯರಿಗೆ ಲಿಂಗ ಸಮಾನತೆ ಬೇಕಾಗಿದೆ ತಾಯಿಯಾಗಿ ಸಲಹುವಳು ಹೆಣ್ಣು ಅಕ್ಕನಾಗಿ ಸರಿ ತಪ್ಪ ತಿದ್ದುವಳು ಹೆಣ್ಣು ತಂಗಿಯಾಗಿ ಕರುಣೆ ತೋರುಗಳು ಹೆಣ್ಣು ಹೆಂಡತಿಯಾಗಿ ಮನೆ ಬೆಳಗುವಳು ಹೆಣ್ಣು ಹೆಣ್ಣು ಬಾಳಿನ ಕಣ್ಣು, ಪ್ರೇಮಮಯಿ ತ್ಯಾಗಮಯಿ ಹೆಣ್ಣು ಸ್ತ್ರೀಯರನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ.

ಸಿಬ್ಬಂದಿ ವರ್ಗದವರಾದ, ದ್ವಿತೀಯ ದರ್ಜೆ ಸಹಾಯಕಿ ಮಂಜುಳಾ ಪಿ. ಆಪ್ತ ಸಮಾಲೋಚಕರಾದ ಸುಷ್ಮಾ ಟಿ. ಎಸ್. ಡಾಟಾ ಎಂಟ್ರಿ ಆಪ್ತಿರಾಮ್, ಶಿಕ್ಷಕಾದ ಅರುಣ ಕುಮಾರಿ, ವೇದಂಭ ವಿಜಯ್, ರಕ್ಷಕರಾದ ದೀಪ, ನಾಗರತ್ನ ,ಪುಟ್ಟಲ್ಲಮ್ಮ ಲಕ್ಷ್ಮಿ ಗೌರಮ್ಮ . ತ್ರಿವೇಣಿ ,ಹಾಗೂ ಬಾಲಕಿಯರ ಬಾಲ ಮಂದಿರದ ಮಕ್ಕಳು ಹಾಜರಿದ್ದರು.

ಕಾವ್ಯ ಯೋಗಿ

ಅಭಿನವ ಬಸವಣ್ಣ



ಶಿವನಸುತನು ಅಪಾರಭಕ್ತಿ ಪ್ರಿಯದಾತನು
ನಡೆದಾಡುವ ಅಭಿನವ ಬಸವ
ಜ್ಯೋತಿಯು
ಇಳೆಯನು ಉದ್ಧರಿಸಲು ಬಂಧ
ಧ್ರುವತಾರೆಯು
ಅನುದಿನವು ಆಗಸದಲ್ಲಿ ಹೊಳೆಯುತಿರುವ
ಶರಣ ಜ್ಯೋತಿಯು
ಶರಣು ನಿಮಗೆ ಹರಿಸು ಭವದ ಬಂಧನದ
ಬೇಡಿಯನು
ಬೆಳಗಿಸು ಮನಕೆ ಜ್ಞಾನದ
ಜ್ಯೋತಿಯನು.....

ರೇಷ್ಮೆ ನಾಡಿನಲ್ಲಿ ಹುಟ್ಟಿ ಬೆಳೆದ ಬಾಲ
ಜ್ಯೋತಿಯು
ಕಲ್ಪವೃಕ್ಷ ನಾಡನ್ನು ಕಟ್ಟಿ ಬೆಳೆಸಿದ ದಿವ್ಯ
ಜ್ಯೋತಿಯು
ಕನ್ನಡ ನಾಡಿನ ಹಿರಿಮೆಯ ಗರಿಯನು
ಲೋಕಕೆ ಸಾರಿದ ಜಗ ಜ್ಯೋತಿಯು
ನುಡಿದಂತೆ ನಡೆದು ಆಧುನಿಕ ಲೋಕದ
ಮಹಾನ್ ಚೇತನವು
ನಡೆದಾಡುವ ಅಭಿನವ ಬಸವ
ಜ್ಯೋತಿಯು

ಭ್ರಕ್ಟಿಭಂಡಾರಿಯು ಮಾರ್ಗವನ್ನು
ನಿಷ್ಠೆಯಿಂದ ಪಾಲಿಸಿದ ಪರಮ
ಜ್ಯೋತಿಯು
ಕಾಯಕ ನೆಲೆಯ ಮಹತ್ವವನ್ನು ಜಗಕೆ
ಪಸರಿಸಿದ ಪುಣ್ಯದ ಜ್ಯೋತಿಯು
ದಾಸೋಹದ ಶ್ರೇಷ್ಠತೆಯನು ಜನರಿಗೆ
ಉಣಬಡಿಸಿದ ಮಂಗಳ ಜ್ಯೋತಿಯು
ಶತಾಯುಷಿಯಾಗಿ ಸಾರ್ಥಕ ಜೀವನ
ನಡೆಸಿದ ಕರುನಾಡಿನ ಜ್ಯೋತಿಯು
ನಡೆದಾಡುವ ಅಭಿನಯ ಬಸವ
ಜ್ಯೋತಿಯು

ವಿದ್ಯೆಯನು ಅರಸಿ ಬಂದ ಮಕ್ಕಳಿಗೆ ವಿದ್ಯೆ
ನೀಡಿದ ವಿಶ್ವಗುರು
ಹಸಿದು ಬಂದವರಿಗೆ ಹಸಿವನು ತಣಿಸಿದ
ಅನ್ನದಾತರು
ನೊಂದು ಬಂದವರಿಗೆ ಸಾಂತ್ವನ ನುಡಿ
ನುಡಿದ ದಿವ್ಯಪುರುಷರು
ರೈತರಿಗೆ ಬೆನ್ನೆಲುಬಾಗಿ ನಿಂತ ಉಳುವ
ಯೋಗಿಯವರು
ನಡೆದಾಡುವ ಅಭಿನವ ಬಸವ
ಜ್ಯೋತಿಯು

–ಶಕುಂತಲಾ ಲಕ್ಷ್ಮಣ

ಕಬಡ್ಡಿ ಕ್ರೀಡೆ ಮಂಡ್ಯ ಜಿಲ್ಲೆಯ ಹಿರಿಮೆಯ ಕ್ರೀಡಾಕೂಟ

ಮಂಡ್ಯ : ಕಬಡ್ಡಿ ಕ್ರೀಡೆ ಮಂಡ್ಯ ಜಿಲ್ಲೆಯ ಹಳ್ಳಿಯ ಸೊಗಡಿನ ಹಿರಿಮೆಯ ಕ್ರೀಡಾಕೂಟವಾಗಿದೆ ಎಂದು ಎಸ್.ಬಿ.ಎಜುಕೇಶನ್ ಟ್ರಸ್ಟ್ ಕಾರ್ಯದರ್ಶಿ ಡಾ.ಮೀರಾಶಿವಲಿಂಗಯ್ಯ ಹೇಳಿದರು.

ನಗರದ ಎಂ.ಸಿ.ರಸ್ತೆಯ ಜ್ಞಾನಸಾಗರ ಕ್ಯಾಂಪಸ್ ಆವರಣದಲ್ಲಿ ತಾವರೆಗೆರೆ ಕೈಗಾರಿಕಾ ತರಬೇತಿ ಸಂಸ್ಥೆಯ 25ನೇ ವರ್ಷದ ಸಂಭ್ರಮಾಚರಣೆ ಅಂಗವಾಗಿ ಗುರುವಾರ ಏರ್ಪಡಿಸಿದ್ದ ಮಂಡ್ಯ ಜಿಲ್ಲಾ ಮಟ್ಟದ ಐಟಿಐ ಕಬಡ್ಡಿ ಪಂದ್ಯಾವಳಿ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಐಟಿಐ ತರಬೇತುದಾರರು ಕಬಡ್ಡಿ ಪಂದ್ಯಾವಳಿಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿ ದೇಶದಲ್ಲಿ ಮಂಡ್ಯದವರು ಕಬಡ್ಡಿಯಲ್ಲಿ ಮುಂದೆ ಎನ್ನುವ ಕೀರ್ತಿ ತನ್ನ ಎಂದು ಶುಭ ಹಾರೈಸಿದರು.

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗ ಅಧಿಕಾರಿ ಸಿ.ಆರ್.ನಾಗರಾಜು ಮಾತನಾಡಿ, ಮಕ್ಕಳಿಗೆ ಪಾಠ–ಪ್ರವಚನಗಳ ಜೊತೆಗೆ ಕ್ರೀಡೆ, ಕಲೆ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವುದರಿಂದ ಮಕ್ಕಳು ದೈಹಿಕ ಹಾಗೂ ಮಾನಸಿಕವಾಗಿ ಸದೃಢವಾಗುವ ಜೊತೆಗೆ ಆರೋಗ್ಯಕರ ಸಮಾಜ ನಿರ್ಮಾಣ ಮಾಡಬಹುದು ಎಂದು ಹೇಳಿದರು.

ಐಟಿಐ ಕಾಲೇಜು ಮಕ್ಕಳಿಗೆ ಕ್ರೀಡಾ ಚಟುವಟಿಕೆ ಆಯೋಜಿಸುವುದು ವಿರಳ. ಇಂತಹ ಸಂದರ್ಭದಲ್ಲಿ ಎಸ್.ಬಿ.ಎಜುಕೇಶನ್ ಟ್ರಸ್ಟ್ ವತಿಯಿಂದ ಕ್ರೀಡಾಕೂಟ ಆಯೋಜಿಸಿರುವುದು ಉತ್ತಮ ಬೆಳವಣಿಗೆಯಾಗಿದೆ. ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಸೋಲು ಗೆಲುವು ಸಹಜ ಎಂದು ತಿಳಿದು ಭಾಗವಹಿಸುವುದು ಮುಖ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಂಡವ್ಯ ಎಕ್ಸಲೆನ್ಸ್ ಪಿಯು ಕಾಲೇಜು ಶೈಕ್ಷಣಿಕ ಪಾಲುದಾರ ಹಾಗೂ ಪ್ರಾಂಶುಪಾಲ ಎಚ್.ಎಂ.ಶ್ರೀನಿವಾಸ್, ಐಟಿಐ ಕಾಲೇಜು ಪ್ರಾಂಶುಪಾಲ ಪ್ರವೀಣ್ ಕುಮಾರ್, ದೈಹಿಕ ಶಿಕ್ಷಣ ಉಪಸ್ಯಾಸಕ ಉಮೇಶ್, ಪ್ರಸನ್ನ, ಸುರೇಶ್, ಪರಮೇಶ್, ಎಸ್.ಬಿ.ಎಜುಕೇಶನ್ ಟ್ರಸ್ಟ್ ಆಡಳಿತಾಧಿಕಾರಿ ತನ್ಮಯ್, ಕರ್ನಾಟಕ ತಂಡದ ಜೂನಿಯರ್ ಕಬಡ್ಡಿ ಚಾಂಪಿಯನ್ ಶಿಪ್ ನಾಯಕಿ ಹಂಶಿತ ಹಾಜರಿದ್ದರು.

ಮಾಜಿ ಸ್ಪೀಕರ್ ಕೃಷ್ಣ ಅಭಿಮಾನಿಗಳ ಸಭೆ: ಜೆಡಿಎಸ್–ಬಿಜೆಪಿ ಅಪವಿತ್ರ ಮೈತ್ರಿಗೆ ಆಕ್ರೋಶ

■ ಕಾಯಕಯೋಗಿ ಸುದ್ದಿ

ಕೃಷ್ಣರಾಜಪೇಟೆ: ಕೆ.ಆರ್.ಪೇಟೆ ತಾಲ್ಲೂಕಿನ ಬಣ್ಣೆನಹಳ್ಳಿ ಗ್ರಾಮದಲ್ಲಿ ಬಿಜೆಪಿ ಮುಖಂಡ ಶ್ರೀನಿವಾಸ್ ಅವರ ತೋಟದಲ್ಲಿ ಜಿಲ್ಲಾ ಪಂಚಾಯತ್ ಮಾಜಿಅಧ್ಯಕ್ಷ ಶೀಳನೆರೆ ಅಂಬರೀಶ್ ಅಧ್ಯಕ್ಷತೆಯಲ್ಲಿ ಸಭೆ ನಡೆಸಿದ ಮಾಜಿಸ್ಪೀಕರ್ ಕೃಷ್ಣ ಅವರ ನೂರಾರು ಅಭಿಮಾನಿಗಳು ಮಾಜಿಸಚಿವ ನಾರಾಯಣಗೌಡ ಅವರ ನಡೆ ಹಾಗೂ ಬಿಜೆಪಿ ಜೆಡಿಎಸ್ ಅಪವಿತ್ರ ಮೈತ್ರಿಯನ್ನು ವಿರೋಧಿಸಿ ತಾಲೂಕಿನ ಸಮಗ್ರವಾದ ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವ ನಿರ್ಧಾರ ಕೈಗೊಂಡರು.

ಭಾನುವಾರ ಕೆ.ಆರ್.ಪೇಟೆಯಲ್ಲಿ ನಡೆಯಲಿರುವ ಮಾಜಿಸ್ಪೀಕರ್ ಕೃಷ್ಣ ಅಭಿಮಾನಿಗಳ ಸಭೆಯಲ್ಲಿ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಭಾಗವಹಿಸುತ್ತಿದ್ದು ಸಚಿವರ ಸಮಕ್ಷಮದಲ್ಲಿ ಜಿಲ್ಲಾ ಪಂಚಾಯತಿ ಮಾಜಿಉಪಾಧ್ಯಕ್ಷ ಶೀಳನೆರೆ ಅಂಬರೀಷ್, ಮನ್‌ಮುಲ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–3 | 31–03–2024

ಮೈಸೂರು

ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಶಿಕ್ಷಕಿಗೆ ಜ್ಞಾನಯೋಗಿ ಶಿವಶರಣೆ ನೀಲಾಂಬಿಕೆ ಪ್ರಶಸ್ತಿ

■ ಕಾಯಕಯೋಗಿ ಸುದ್ದಿ

ನಂಜನಗೂಡು: ನಂಜನಗೂಡು ತಾಲ್ಲೂಕಿನ ಹುರ ಗ್ರಾಮದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಶಿಕ್ಷಕಿ ಪದ್ಮ ನೆಲ್ಲಿತಾಳಪುರ ಅವರಿಗೆ ಜ್ಞಾನ ಯೋಗಿ ಶಿವಶರಣೆ ನೀಲಾಂಬಿಕೆ ಪ್ರಶಸ್ತಿ ಲಭಿಸಿದೆ. ವಿಶ್ವ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ಸಂಸ್ಥೆ, ವಿಶ್ವ ಕನ್ನಡ ಕಲಾ ಸಂಸ್ಥೆ ವತಿಯಿಂದ ಬೆಂಗಳೂರಿನ ಮಹಾಲಕ್ಷ್ಮಿ ಕಲ್ಯಾಣ ಮಂಟಪದಲ್ಲಿ ನಡೆದ ವಿಶ್ವಕನ್ನಡ ಪ್ರಥಮ ರಾಜ್ಯಮಟ್ಟದ ಮಹಿಳಾ ಸಾಹಿತ್ಯ ಸಮ್ಮೇಳನದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳಾ ಸಾಧಕೀಯರನ್ನು ಗುರುತಿಸಿ ಸುಮಾರು 29 ಮಹಿಳಾ ಸಾಧಕೀಯರಿಗೆ ಪ್ರಶಸ್ತಿ ನೀಡಲಾಗಿದೆ. ಶಿಕ್ಷಣ ಕ್ಷೇತ್ರದಲ್ಲಿ ಮಾಡಿರುವ ಸಾಧನೆಯನ್ನು ಪರಿಗಣಿಸಿ, ವಿಶ್ವ ಕನ್ನಡ ಪ್ರಥಮ ರಾಜ್ಯಮಟ್ಟದ ಮಹಿಳಾ ಸಾಹಿತ್ಯ ಸಮ್ಮೇಳನ ಮತ್ತು ಪುಸ್ತಕ ಲೋಕಾರ್ಪಣೆ, ಸಾಧಕರಿಗೆ ಸನ್ಮಾನ, ಕವಿಗೋಷ್ಠಿ, ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಶಿಕ್ಷಕಿ ಪದ್ಮ ನೆಲ್ಲಿತಾಳಪುರ ಅವರನ್ನು ಗುರುತಿಸಿ ಜ್ಞಾನ



ಯೋಗಿ ಶಿವಶರಣೆ ನೀಲಾಂಬಿಕೆ ಪ್ರಶಸ್ತಿಯನ್ನು ನೀಡಿ ಅಧ್ಯಕ್ಷೆ ಕಮಲಾರಾಜೇಶ್, ಗೌರವಾಧ್ಯಕ್ಷ ಆರ್ ಗೌರವಸಲಾಗಿದೆ. ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವೈ.ಬಿ.ಹೆಚ್ ಜಯದೇವ್, ಸಮ್ಮೇಳನದ ಡಾ.ಈ ರವೀಶ್ ಪ್ರಶಸ್ತಿ ನೀಡಿ ಅಭಿನಂದಿಸಿದ್ದಾರೆ.

ವಿದ್ಯುತ್ ವ್ಯತ್ಯಯ

■ ಕಾಯಕಯೋಗಿ ಸುದ್ದಿ

ಮೈಸೂರು: ಮಾ.31 ರಂದು ಬೆಳಿಗ್ಗೆ 10:00 ರಿಂದ ಸಂಜೆ 5:30 ಗಂಟೆಯವರೆಗೆ ಕೆ.ವಿ ದೂರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಕ.ವಿ.ಪ್ರನಿನಿ ಮತಿಯಿಂದ 4ನೇ ತೈ.ಮಾಸಿಕ ನಿರ್ವಹಣಾ ಕಾಮಗಾರಿ ಯನ್ನು ಹಮ್ಮಿಕೊಳ್ಳಲಾಗಿದೆ.



ಆದ್ದರಿಂದ ದೂರ, ತಳೂರು, ಮುರುಡಗಳ್ಳಿ ದೊಡ್ಡಕಾಟೂರು, ಚಿಕ್ಕ ಕಾಟೂರು, ಸಿಂಧುವಳ್ಳಿ ಗ್ರಾಮ, ನಂಜುಂಡೇಶ್ವರ ಬಡಾವಣೆ ಹಾಗೂ ನಂಜನಗೂಡು ವಿಭಾಗದ ಹಳ್ಳಿಕೆರೆಹುಂಡಿ, ಬಿದರಗೂಡು, ಮೂಡಲಹುಂಡಿ (ಕಾಟೂರು) ನೀರು ಸರಬರಾಜು ಕೇಂದ್ರಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕೆಂದು ಸ.ಾ.ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್(ಎ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲೋಕಸಭಾ ಚುನಾವಣೆ: ಅಭ್ಯರ್ಥಿಗಳು ಹಣ ವೆಚ್ಚ ಮಾಡುತ್ತಿರುವ ಬಗ್ಗೆ ನಿಗಾವಹಿಸಿ

■ ಕಾಯಕಯೋಗಿ ಸುದ್ದಿ

ಮೈಸೂರು: ಮುಕ್ತ ಹಾಗೂ ನ್ಯಾಯಸಮ್ಮತವಾಗಿ ಚುನಾವಣೆ ನಡೆಯಲು ನಿಗದಿಪಡಿಸಿರುವ ವೆಚ್ಚದಂತೆ ಅಭ್ಯರ್ಥಿಗಳು ಹಣ ವೆಚ್ಚ ಮಾಡುತ್ತಿರುವ ಬಗ್ಗೆ ತೀವ್ರ ನಿಗಾ ಇಡಬೇಕು ಎಂದು ಹುಣಸೂರು ಹಾಗೂ ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದ ವೆಚ್ಚ ವೀಕ್ಷಕರಾದ ಸುರೇಶ್. ಎ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯಕ ವೆಚ್ಚ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

ಎಂಸಿಸಿ ತಂಡಗಳು ಮಾದರಿ ನೀತಿ ಸಂಹಿತೆ ಉಲ್ಲಂಘನೆ ಆಗದಂತೆ ಎಚ್ಚರ ವಹಿಸಬೇಕು. ಸಹಾಯಕ ವೆಚ್ಚ ವೀಕ್ಷಕರು, ಫ್ಲೈಯಿಂಗ್ ಸ್ಕ್ವಾಡ್‌ಗಳು, ವಿಡಿಯೋ ಸರ್ವೆಲನ್ಸ್, ವಿಡಿಯೋ ವಿಷ್ಣಿಗ್ ತಂಡಗಳು, ಸ್ಟಾಟಿಕ್ ಸರ್ವೆಲನ್ಸ್ ತಂಡಗಳು ಇನ್ನೂ ಜಾಗೃತರಾಗಿ ಕಾರ್ಯನಿರ್ವಹಿಸಬೇಕು. ಮುಕ್ತ ನ್ಯಾಯಸಮ್ಮತ ಚುನಾವಣೆ ನಡೆಸಲು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಚುನಾವಣಾಧಿಕಾರಿಗಳು ಈಗಾಗಲೇ ಚುನಾವಣಾ ಖರ್ಚು ವೆಚ್ಚದ ನಿಗಾ ಕುರಿತು ಜಿಲ್ಲೆಯ ವಿಧಾನಸಭಾ ಕ್ಷೇತ್ರದ ಎಆಆರ್‌ಒಗಳೊಂದಿಗೆ ಅಧಿಕಾರಿಗಳೊಂದಿಗೆ ಸಿದ್ಧತೆ ಮಾಡಿಕೊಡಿದ್ದಾರೆ. ಚುನಾವಣೆ ಕರ್ತವ್ಯವನ್ನು ನಿಷ್ಪಕ್ಷ ಹಾಗೂ ನ್ಯಾಯ ಸಮ್ಮತವಾಗಿ ನಡೆಸುವ ಹಿನ್ನೆಲೆಯಲ್ಲಿ ನಿಯೋಜನೆಗೊಂಡ ಎಲ್ಲ ತಂಡಗಳೂ ಖರ್ಚು ವೆಚ್ಚಗಳ ಬಗ್ಗೆ ಗಮನ ವಹಿಸಬೇಕು. ಅಭ್ಯರ್ಥಿಗಳು ಮಾಡುವ ಖರ್ಚು ವೆಚ್ಚಗಳ ಬಗ್ಗೆಯೂ ತೀವ್ರ ನಿಗಾ ಇಡಬೇಕು ಎಂದು ನಿರ್ದೇಶನ ನೀಡಿದರು.

ಚುನಾವಣಾ ಅಭ್ಯರ್ಥಿ ಪ್ರಚಾರಕ್ಕಾಗಿ ಬಂದಂತಹ ಸಂದರ್ಭದಲ್ಲಿ, ತಂಡಗಳು ಕಾರ್ಯಕ್ರಮ ಅಥವಾ ಸಮಾರಂಭಗಳಲ್ಲಿ ಆಗುವಂತಹ ಖರ್ಚು ವೆಚ್ಚಗಳ ಬಗ್ಗೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದರು.

ಅನಧಿಕೃತ ಮದ್ಯ ಸಾಗಾಣಿಕೆ ಬಗ್ಗೆ ನಿಗಾ ವಹಿಸಿ ಅನಧಿಕೃತವಾಗಿ ಮದ್ಯ ಸಾಗಾಣಿಕೆ ಹಾಗೂ ಸಂಗ್ರಹಣೆಯ ಬಗ್ಗೆ ವಿವಿಧ ತಂಡಗಳು ಹೆಚ್ಚು ನಿಗಾ ವಹಿಸಬೇಕು. ಸೂಕ್ಷ್ಮ ಸ್ಥಳಗಳಲ್ಲಿರುವ ಮದ್ಯದ ಅಂಗಡಿಗಳನ್ನು ಚೆಟ್ಟಿ ಮಾಡಿಕೊಂಡು ಅಬಕಾರಿ ಇಲಾಖೆಯ ಅವರು ತೀವ್ರ ಗಮನ ಹರಿಸಬೇಕು ಎಂದರು.



ಬ್ಯಾಂಕ್ ವಹಿವಾಟಿನ ಮೇಲೆ ನಿಗಾ ಬ್ಯಾಂಕ್ ಖಾತೆಗಳಲ್ಲಿ ನಡೆಯುವ ಸಂಶಯಾಸ್ಪದ ವಹಿವಾಟು, ಹೆಚ್ಚಿನ ಹಣ ವರ್ಗಾವಣೆ, ಒಂದು ಖಾತೆಯಿಂದ ಹೆಚ್ಚಿನ ಖಾತೆಗೆ ಹಣ ವರ್ಗಾವಣೆ ಕುರಿತಂತೆ ಪ್ರತಿದಿನ ಪರಿಶೀಲನೆ ನಡೆಸಬೇಕು ಎಂದರು.

ಜಿಲ್ಲಾಧಿಕಾರಿ ಡಾ ಕೆ.ವಿ.ರಾಜೇಂದ್ರ ಅವರು ಆಕ್ಸಿಟಿಂಗ್ ಟೀಂ ನವರು ಶ್ಯಾಡೋ ರಿಜಿಸ್ಟರ್ ಸೇರಿದಂತೆ ವಿವಿಧ ಕಡತ ನಿರ್ವಹಣೆಯ ಬಗ್ಗೆ, ರಾಜಕೀಯ ಪಕ್ಷಗಳಿಗೆ ಪ್ರಚಾರಕ್ಕಾಗಿ ಅನುಮತಿ ನೀಡಲು ತೆರೆದಿರುವ ಏಕಗವಾಕ್ಷಿ ಕೇಂದ್ರ ಸೇರಿದಂತೆ ಮಾಡಿ ಕೊಂಡಿರುವ ವ್ಯವಸ್ಥೆಗಳ ಬಗ್ಗೆ ವಿವರಿಸಿದರು.

ಸಹಾಯಕ ಚುನಾವಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ತಂಡಗಳ ಅಧಿಕಾರಿಗಳು ಅಭ್ಯರ್ಥಿ ಹಾಗೂ ರಾಜಕೀಯ ಪಕ್ಷಗಳಿಗೆ ನಿಗದಿಯಾಗುವ ಚುನಾವಣಾ ವೆಚ್ಚದ ಕುರಿತು ಸರಿಯಾದ ಲೆಕ್ಕಪತ್ರಗಳು ಇರಬೇಕು. ಈ ಸಂಬಂಧ ಯಾವುದೇ ಗೊಂದಲಕ್ಕೆ ಒಳಗಾಗದೇ ಎಲ್ಲ ದಾಖಲೆಗಳನ್ನು ಸರಿಯಾಗಿ ನಿರ್ವಹಿಸಬೇಕು ಎಂದು ತಿಳಿಸಿದರು.

ಸಭೆಯ ನಂತರ ವೆಚ್ಚ ವೀಕ್ಷಕರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿತವಾಗಿರುವ ಕಂಟ್ರೋಲ್ ರೂಂ, ಮಾಧ್ಯಮ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಜಿಲ್ಲಾಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯಿತ್ರಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನಂದಿನಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಸರ್ವಾಧಿಕಾರಿ, ಜನವಿರೋಧಿ ಬಿಜೆಪಿ ಸರ್ಕಾರ ಕಿತ್ತೊಗೆದು ಪ್ರಜಾಪ್ರಭುತ್ವ ಉಳಿವಿಗಾಗಿ; ದಸಂಸದಿಂದ ಜನ ಜಾಗೃತಿ ಅಭಿಯಾನ

■ ಕಾಯಕಯೋಗಿ ಸುದ್ದಿ

ಮೈಸೂರು: ಏ.14 ರಂದು ಅಂಬೇಡ್ಕರ್ ಜಯಂತಿ ಪ್ರಯುಕ್ತ ಸರ್ವಾಧಿಕಾರಿ, ಜನವಿರೋಧಿ ಬಿಜೆಪಿ ಸರ್ಕಾರವನ್ನು ಕಿತ್ತೊಗೆದು ಪ್ರಜಾಪ್ರಭುತ್ವ ಉಳಿವಿಗಾಗಿ ದಲಿತ ಸಂಘರ್ಷ ಸಮಿತಿ ಸಂಯೋಜಕದಿಂದ ಜನ ಜಾಗೃತಿ ಅಭಿಯಾನವನ್ನು ನಡೆಸಲು ತೀರ್ಮಾನವನ್ನು ಮಾಡಲಾಗಿದೆ.

ಮೈಸೂರಿನ ಬಳ್ಳಾಳ್ ಸರ್ಕಲ್ ನಲ್ಲಿರುವ ಬುದ್ಧ ವಿಹಾರದಲ್ಲಿ ದಲಿತ ಸಂಘರ್ಷ ಸಮಿತಿ ಸಂಯೋಜಕ ಜಿಲ್ಲಾ ಸಮಿತಿ ಮೈಸೂರು ಇವರ ವತಿಯಿಂದ ಪದಾಧಿಕಾರಿಗಳ ಪೂರ್ವ ಭಾವಿ ಸಭೆಯನ್ನು ನಡೆಸಲಾಯಿತು.

ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಯೋಜಕ ಕಾರ್ಯ ಬಸವಣ್ಣ ಮಾತನಾಡಿ, ಬಿಜೆಪಿ ಸರ್ಕಾರದಿಂದ ಜನರಿಗೆ ಆಗಿರುವ ಅನ್ಯಾಯಗಳು ಮತ್ತು ಜನ ವಿರೋಧಿ ನೀತಿಗಳನ್ನು ಜನರಿಗೆ ತಿಳಿಸುವ ಅಗತ್ಯವಿದ್ದು,



ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ರಕ್ಷಿಸಿಕೊಳ್ಳಬೇಕಾಗಿರುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ.

ಆದಕ್ಕಾಗಿ ಏ.14ರಂದು ಬೆಳಿಗ್ಗೆ 11:30ಕ್ಕೆ ಮೈಸೂರಿನ ಟೌನ್ ಹಾಲ್ ಎದುರು ಅಂಬೇಡ್ಕರ್ ಪ್ರತಿಮೆ ಬಳಿ ಜನ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಲಾಗುತ್ತದೆ. ಚುನಾವಣೆ ಮುಗಿಯುವ ತನಕ ಜನಜಾಗೃತಿ ಅಭಿಯಾನವನ್ನು ನಡೆಸಲಾಗುತ್ತದೆ. ಮೈಸೂರು ಮತ್ತು ಚಾಮರಾಜನಗರ ಲೋಕಸಭಾ ವ್ಯಾಪ್ತಿಯಲ್ಲಿ ವ್ಯಾಪಕವಾಗಿ ಜಾಗೃತಿಯನ್ನು ಮೂಡಿಸಲು ನಾವು ತೀರ್ಮಾನ ಮಾಡಿದ್ದೇವೆ.

ಈ ಅಭಿಯಾನದಲ್ಲಿ ಕಳೆದ ಹತ್ತು ವರ್ಷಗಳಿಂದ ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರ ಮತ್ತು ಪ್ರಧಾನಿ ನರೇಂದ್ರ ಮೋದಿಯವರ ಸರ್ವಾಧಿಕಾರಿ ಧೋರಣೆ, ಪ್ರಜಾಪ್ರಭುತ್ವ, ಸಂವಿಧಾನ ಮತ್ತು ಜನರ ಮೇಲೆ ಆಗಿರುವ ದೌರ್ಜನ್ಯ, ಜನ ವಿರೋಧಿ ನಿಲುವುಗಳು ಬಡವರು ಮತ್ತು ಮಹಿಳಾ ವಿರೋಧಿ ನೀತಿಗಳ ಬಗ್ಗೆ ಜನರಿಗೆ ಜಾಗೃತಿಯನ್ನು ಮೂಡಿಸಲು ಈ ಕಾರ್ಯಕ್ರಮವನ್ನು ಆಯೋಜನೆ ಮಾಡಿದ್ದೇವೆ ಎಂದು ತಿಳಿಸಿದ್ದಾರೆ.

ಸಭೆಯ ಅಧ್ಯಕ್ಷತೆಯನ್ನು ದಸಂಸ ರಾಜ್ಯ ಸಂಘಟನಾ ಸಂಯೋಜಕರಾದ ದೇವಗಳ್ಳಿ ಸೋಮಶೇಖರ್ ವಹಿಸಿದ್ದರು.

ಈ ಸಂದರ್ಭದಲ್ಲಿ ದಸಂಸ ಜಿಲ್ಲಾ ಸಂಯೋಜಕರಾದ ಹುಣಸೂರು ಪ್ರಕಾಶ್, ಗೋವಿಂದ, ತಾಲೂಕು ಸಂಚಾಲಕರಾದ ಮೇಜು ಕುಮಾರ್, ಸಿದ್ದರಾಜು, ಕಡಕೆ ಕುಮಾರ್, ಡೇವಿಡ್, ಕುಮಾರ್ ಹೆಗ್ಗಡಪುರ, ಬೆಲವತ್ತ ರಾಮಚಂದ್ರ, ಕೃಷ್ಣಮೂರ್ತಿ, ಪುಟ್ಟ ಬುದ್ಧಿ, ಸೋಮಣ್ಣ ಚಿಕ್ಕಣ್ಣ, ಕೃಷ್ಣ ನಟೇಶ್, ರಾಜಮ್ಮ, ದರ್ಶನ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಮೈಸೂರು ಕೊಡಗು ಲೋಕಸಭಾ ಚುನಾವಣೆ– ಎರಡನೇ ದಿನ ಒಂದು ನಾಮಪತ್ರ ಸಲ್ಲಿಕೆ



ಮೈಸೂರು ಕೊಡಗು ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಅಂಗವಾಗಿ ಎರಡನೇ ದಿನವಾದ ಶನಿವಾರ ಅಖಿಲ ಭಾರತ ಹಿಂದೂ ಮಹಾಸಭಾ ಪಕ್ಷದ ಅಭ್ಯರ್ಥಿಯಾಗಿ ಎ.ಎಸ್. ಸತೀಶ್ ಅವರು ಜಿಲ್ಲಾ ಚುನಾವಣಾಧಿಕಾರಿ ಡಾ:ಕೆ.ವಿ.ರಾಜೇಂದ್ರ ಅವರಿಗೆ ನಾಮಪತ್ರ ಸಲ್ಲಿಸಿದರು.

ಚುನಾವಣೆಗೆ ಅಧಿಸೂಚನೆ ಪ್ರಕಟವಾದ ಮೊದಲ ದಿನ ಇಬ್ಬರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದರು, ಎರಡನೇ ದಿನ ಸ್ವರ್ಧೆ ಬಯಸಿ ಅಖಿಲ ಭಾರತ ಹಿಂದೂ ಮಹಾಸಭಾ ಪಕ್ಷದ ಅಭ್ಯರ್ಥಿಯಾಗಿ ಎ.ಎಸ್. ಸತೀಶ್ ನಾಮಪತ್ರ ಸಲ್ಲಿಸಿದ್ದು, ಇದುವರೆಗೆ ಮೂವರು ಉಮೇದುವಾರಿಕೆ ಸಲ್ಲಿಸಿದ್ದಾರೆ.

ಅಕ್ರಮ ವಸ್ತುಗಳ ವಶ

■ ಕಾಯಕಯೋಗಿ ಸುದ್ದಿ

ಮೈಸೂರು: ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಅಂಗವಾಗಿ ನಂಜನಗೂಡಿನಿಂದ ಹುಣಸೂರಿಗೆ ಸರಬರಾಜಾದ 650 ಮಿಲಿಯ ಕಿಂಗ್ ಫಿಷರ್ ಸ್ಟ್ರಾಂಗ್ ಪ್ರೀಮಿಯಂನ ಒಟ್ಟು 1150 ರ.ಪೆ ಬಿಯರ್‌ನ ಪೈಕಿ 07 ರಟ್ಟಿನ ಪೆಟ್ಟಿಗೆಗಳಲ್ಲಿ ಜಪ್ತಿಯಾಗಿರುವ ಕಿವಿ ಅಂಜಿಜ, ಖಿಣುಳಿಣಾಜಿಡಿ ಅಥವಾ ಕಂಟ್ರೋಲಿಂಗ್ ಭದ್ರತಾ ಚೀಟಿಗಳು ಇರುವುದಿಲ್ಲ ಹಾಗೂ ಎರಡು ರಟ್ಟಿನ ಪೆಟ್ಟಿಗೆಗಳ ಬಾರ್ ಕೋಡ್ ಇದ್ದರೂ ಅವುಗಳು ಮಿಸ್ ಮ್ಯಾಚ್ ಆಗಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಹುಣಸೂರು ಉಪ ವಿಭಾಗದ ಅಬಕಾರಿ ನಿರೀಕ್ಷಕರಾದ ಗೀತಾ ಡಿ. ರವರು ನಂಜನಗೂಡಿನ ಯುನೈಟೆಡ್ ಬ್ರೀವರೀಸ್ ಲಿ. ನ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಇದರ ಒಟ್ಟು ಮೌಲ್ಯ ರೂ. 23,07,049 ಗಳಾಗಿರುತ್ತವೆ.

ಚುನಾವಣೆ ನೀತಿ ಸಂಹಿತೆ ಜಾರಿಯಾದ ಮಾ.16 ರಿಂದ 29 ರವರೆಗೆ ಮೈಸೂರು ಗ್ರಾಮಾಂತರ ಜಿಲ್ಲೆಯ ಅಬಕಾರಿ ಇಲಾಖಾ ವತಿಯಿಂದ ಅಕ್ರಮ ಮದ್ಯ ಚಿಟುಮಟಿಕೆಗಳನ್ನು ಪತ್ತೆಹಚ್ಚಿ ಅಬಕಾರಿ ಕಾನೂನಿನ್ವಯ ಒಟ್ಟು 148 ಮೊಕದ್ದಮೆಗಳನ್ನು ದಾಖಲಿಸಿದ್ದು, 376.445 ಲೀ. ಮದ್ಯ, 351432 630 ಲೀ. ಬಿಯರ್ ಮತ್ತು ಒಟ್ಟು 18 ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಇವುಗಳ ಒಟ್ಟಾರೆ ಮೌಲ್ಯ 8,36,37,858 ರೂ. ಆಗಿರುತ್ತದೆ ಎಂದು ಮೈಸೂರು ಗ್ರಾಮಾಂತರ ಜಿಲ್ಲೆಯ ಡೆಪ್ಯುಟಿ ಕಮೀಷನರ್ ಆಫ್ ಎಕ್ಸೈಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಡಬೂರು ಗ್ರಾಮದಲ್ಲಿ ಕುಡಿಯುವ ನೀರಿಗಾಗಿ ಗ್ರಾಮಸ್ಥರ ಅಲೆದಾಟ

ಖಾಲಿ ಕೊಡೆ ಹಿಡಿದು ಮಹಿಳೆಯರ ಆಕ್ರೋಶ

■ ಕಾಯಕಯೋಗಿ ಸುದ್ದಿ

ನಂಜನಗೂಡು: ತಾಲ್ಲೂಕಿನ ನೆಲ್ಲಿತಾಳಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಡಬೂರು ಗ್ರಾಮದಲ್ಲಿ ಕುಡಿಯುವ ನೀರಿಗಾಗಿ ಗ್ರಾಮಸ್ಥರು ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ನಮಗೆ ಕುಡಿಯುವ ನೀರು ಕೊಡಿ ಎಂದು ಖಾಲಿ ಕೊಡೆ ಹಿಡಿದು ಮಹಿಳೆಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕುಡಿಯುವ ನೀರಿನ ಸಮಸ್ಯೆ ಬಗ್ಗೆ ನೆಲ್ಲಿತಾಳಪುರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಗಮನಕ್ಕೆ ತಂದರು ಯಾವುದೇ ಪ್ರಯೋಜನವಾಗಿಲ್ಲ.



ಗ್ರಾಮದಿಂದ ಸುಮಾರು 1 ಕಿಲೋ ಮಿಟರ್ ದೂರದಿಂದ ನೀರನ್ನು ತಂದು ಕುಡಿಯುವ ಪರಿಸ್ಥಿತಿ ನಿರ್ಮಾಣವಾಗಿದೆ. ದಿನಗೂಲಿಯಿಂದ ಜೀವನ ನಡೆಸುವ ನಾವು ನೀರಿಗಾಗಿ ಪರದಾಡುವಂತಾಗಿದ್ದು, ಸುತ್ತ ಮುತ್ತಲಿನ ಕೆರೆ ಕಟ್ಟೆಗಳು ಬತ್ತಿ ಹೋಗಿವೆ. ಇದರಿಂದ ಜನ–ಜಾನುವಾರುಗಳಿಗೂ ನೀರಿಲ್ಲದೆ ತುಂಬ ತೊಂದರೆಯಾಗಿದೆ .

ಸುಮಾರು 20 ದಿನಗಳಿಂದ ಕುಡಿಯುವ ನೀರಿನ ಸಮಸ್ಯೆಯಾಗಿದ್ದು, ಗ್ರಾಮದಲ್ಲಿರುವ 2 ಕೈ ಪಂಪ್‌ಗಳು ಕೂಡ ಕೆಟ್ಟು ನಿಂತಿವೆ .

ಓವರ್ ಹೆಡ್ ಟ್ಯಾಂಕ್ ನ ಪೈಪ್ ಹೊಡೆದು ಗ್ರಾಮಕ್ಕೆ ನೀರು ಸರಬರಾಜಾಗುತ್ತಿಲ್ಲ. ಕೂಡಲೇ ಗ್ರಾಮಕ್ಕೆ ಕುಡಿಯುವ ನೀರನ್ನು ಪೂರೈಕೆ ಮಾಡಬೇಕು ಇಲ್ಲವಾದಲ್ಲಿ ಗ್ರಾಮ ಪಂಚಾಯಿತಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ಮಾಡಲಾಗುತ್ತದೆ ಎಂದು ಗ್ರಾಮದ ಮುಖಂಡ ಶಿವರಾಜು ಮತ್ತು ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

ರಂಗೇರುತ್ತಿದೆ ಚಾಮರಾಜನಗರ ಲೋಕಸಭಾ ಕ್ಷೇತ್ರ

ಸಿಎಂ, ಹೆಚ್.ಸಿ.ಎಂ.ಗೆ ಪ್ರತಿಷ್ಠೆಯ ಕಣ

■ ಕಾಯಕಯೋಗಿ ಸುದ್ದಿ
ಸಿ.ಎಂ ಸುಗಂಧರಾಜು

ಮೈಸೂರು: ಲೋಕಸಭೆ ಚುನಾವಣೆಗೆ ಇನ್ನೇನು ಕೆಲವೇ ದಿನಗಳು ಬಾಕಿ ಉಳಿದಿವೆ. ಈಗಾಗಲೇ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆ ರಂಗೇರುತ್ತಿದೆ. ಸದ್ಯ ಈ ಕ್ಷೇತ್ರ ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ ಮಹದೇವಪ್ಪ ಅವರಿಗೆ ಪ್ರತಿಷ್ಠೆಯ ಕಣವಾಗಿದೆ.

ಜನರ ನಾಡಿ ಮಿಡಿತ ಅರಿಯೋದು ರಾಗಿ ಮೂಟೆಯಲ್ಲಿ ನಾಲ್ಕು ಕಾಳು ಸಾಸಿವೆ ಹುಡುಕಿದಂತೆ. ಅಷ್ಟಾಗಿಯೂ ಕ್ಷೇತ್ರಗಳ ಲೆಕ್ಕಾಚಾರ ಮಾಡದೇ ಇರೋಕಾಗಲ್ಲ. ಅಂಥದ್ರೊಂದು ಪ್ರಯತ್ನವನ್ನು ಕಾಯಕ ಯೋಗಿ ದಿನ ಪತ್ರಿಕೆ ಮಾಡಿದೆ.

ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಜಾತಿ ಸಮೀಕರಣ ಒಂಥರ ಇದ್ದರೆ, ಸಿದ್ಧಾಂತದ ಬಿಗಿ ಹೆಜ್ಜೆಯೂ ಇದೆ. ಹಾಗಿದ್ರೆ ಅಲ್ಲಿನ ಮತದಾರರ ಸಂಖ್ಯೆ ಎಷ್ಟು? ಯಾವ ಪಕ್ಷದ ತೂಕ ಬಲವಾಗಿದೆ?


ಚಾಮರಾಜನಗರ
ಹನೂರು
ಕೊಳ್ಳೇಗಾಲ (ಎಸ್.ಸಿ)
ಚಾಮರಾಜನಗರ (ಎಸ್.ಸಿ)
ಹುಣಸೂ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ-4
31-03-2024
ತುಮಕೂರು-ಚಾಮರಾಜನಗರ

ತಾಳವಾಡಿಯಲ್ಲಿ ಮಾರಮ್ಮನ ಜಾತ್ರೆ ಮಸೀದಿ ಮುಂದೆ ಕೊಂಡ ಹಾಯ್ದು ಭಾವೈಕ್ಯತೆ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಅಪ್ಪಟ ಕನ್ನಡಿಗರೇ ಇರುವ ತಮಿಳುನಾಡಿನ ತಾಳವಾಡಿಯಲ್ಲಿ ಹಿಂದೂ-ಮುಸ್ಲಿಂ ಭಾವೈಕ್ಯತೆ ಸಾರುವ ಮಾರಮ್ಮನ ಕೊಂಡೋತ್ಸವ ವಿಜೃಂಭಣೆಯಿಂದ ನಡೆದಿದೆ. ಚಾಮರಾಜನಗರ ಜಿಲ್ಲೆಯ ಗಡಿಭಾಗಕ್ಕೆ ಹೊಂದಿಕೊಂಡಿರುವ ತಮಿಳುನಾಡಿನ ತಾಳವಾಡಿಯಲ್ಲಿ ಮಾರಮ್ಮನ ಜಾತ್ರೆ ಪ್ರಯುಕ್ತ ಮಸೀದಿ ಮುಂಭಾಗದಲ್ಲೇ ಕೊಂಡೋತ್ಸವ ನಡೆಯಿತು. ಈ ಮೂಲಕ ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ತಾಳವಾಡಿ ಸಾಕ್ಷಿಯಾಯಿತು. ಸುಮಾರು 150 ವರ್ಷಗಳಿಂದ ಈ ಕೊಂಡೋತ್ಸವ ನಡೆಯುತ್ತಾ ಬಂದಿದ್ದು, ತಾಳವಾಡಿ ಫಿರ್ಕಾದ 58 ಗ್ರಾಮಗಳು ಸೇರಿದಂತೆ ಚಿಕ್ಕರಾಜನಗರ, ತಮಿಳುನಾಡಿನ ಈರೋಡ್, ಕೊಯಮತ್ತೂರು ಸೇರಿದಂತೆ ವಿವಿಧೆಡೆಯಿಂದ ಸಾವಿರಾರು ಭಕ್ತರು ಧಾರ್ಮಿಕ ಉತ್ಸವದಲ್ಲಿ ಪಾಲ್ಗೊಂಡಿದ್ದರು. ಗ್ರಾಮದ ಮುಖ್ಯ ಬೀದಿಯಲ್ಲಿರುವ ಮಾರಮ್ಮನ ದೇಗುಲದ ಪಕ್ಕ ಮಸೀದಿ ಇದೆ. ಇದರ ಗೋಡೆಗೆ ಅಂಟಿಕೊಂಡಂತೆ ಟ್ರಸ್ಟಿಗುಂಡ್ಲು ಕಾಲದಲ್ಲಿ ನಿರ್ಮಾಣವಾಗಿರುವ ಮೇಗಾಗೋಪಾಲ ಸ್ವಾಮಿ ಗುಡಿ ಇದೆ. ಮಸೀದಿ ಮುಂಭಾಗದಲ್ಲೇ ಕೊಂಡೋತ್ಸವ ಜರುಗುವುದು ಈ ಜಾತ್ರೆಯ ವಿಶೇಷ. 4 ದಶಕದ ಹಿಂದೆ ಜಾತ್ರೆ ಸಂಬಂಧ ಘರ್ಷಣೆಯಾಗಿತ್ತು ನಂತರ ಊರಿನ ಎಲ್ಲಾ ಕೋಮಿನ ಮುಖಂಡರು ಕುಳಿತು ಚರ್ಚಿಸಿ ಯಾವುದೇ ಗಲಾಟೆಗೆ ಅವಕಾಶ ನೀಡದಂತೆ ಸಮಾಜದಲ್ಲಿ ಸಾಮರಸ್ಯ ಕಾಪಾಡುವುದರೊಂದಿಗೆ ಜಾತ್ರಾ ಮಹೋತ್ಸವ ಆಚರಣೆಗೆ ಮುಂದಾಗಿದ್ದರು. ಅದರಿಂದಲೂ ಸಾವಿರಕ್ಕಿಂದ ಮಸೀದಿ ಮುಂಭಾಗ ಕೊಂಡೋತ್ಸವ ನಡೆದುಕೊಂಡು ಬಂದಿದ್ದು ದೇವಾಲಯ ಅರ್ಚಕ ಶಿವಣ್ಣ ಗುರುವಾರದಂದು ಕೊಂಡ ಹಾಯ್ದರು.



ರಾಷ್ಟ್ರ-ರಾಜ್ಯದ ಅಭಿವೃದ್ಧಿಗೆ ಎಚ್.ಡಿ.ದೇವೇಗೌಡರ ಕೊಡುಗೆ ಅಪಾರ

ಸುಧಾಕರ್ ಲಾಲ್ –ಅನಿಲ್‌ಕುಮಾರ್ ಸೇರಿದ್ರೇ ಕುರುಕ್ಷೇತ್ರವೇ ಮೀರಿಸುವ ಪ್ರಬಲಶಕ್ತಿ ಸೃಷ್ಟಿ : ಗೋಪಾಲಯ್ಯ


■ ಕಾಯಕಯೋಗಿ ಸುದ್ದಿ

ಕೊರಟಗೆರೆ: ಕೇಂದ್ರ ಸರಕಾರದಿಂದ ಕೊರಟಗೆರೆ ಕ್ಷೇತ್ರಕ್ಕೆ ಹೈಟೆಕ್ ಆಸ್ಪತ್ರೆ ತಂದೇ ತರುತ್ತೇನೆ ಇದು ಕೇವಲ ಭರವಸೆ ಅಲ್ಲ ಬಡ ಜನರ ನೋವಿನ ಮನವಿ. ಗ್ರಾಮೀಣ ಭಾಗದ ರಸ್ತೆಗಳ ಅಭಿವೃದ್ಧಿಗೆ ಪ್ರಥಮ ಆದ್ಯತೆ. ಸಿದ್ದರಬೆಟ್ಟ ಮತ್ತು ಏಳುಸುತ್ತಿನ ಕೋಟೆಯನ್ನು ಪ್ರವಾಸಿ ತಾಣವನ್ನಾಗಿ ಮಾಡುವ ರೂಪುರೇಷು. ಕೊರಟಗೆರೆ ಕ್ಷೇತ್ರದ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರ ಕಾವಲುಗಾರನಾಗಿ ನಾನು ಹಗಲುರಾತ್ರಿ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

ಮಾಜಿ ಸಚಿವ ಗೋಪಾಲಯ್ಯ ಮಾತನಾಡಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದರೇ ರಾಜ್ಯಕ್ಕೆ ಬರಗಾಲವು ತಾನಾಗಿಯೇ ಬರುತ್ತೇ. ಕುಡಿಯುವ ನೀರು ಮತ್ತು ಮೇವಿಗೆ ಹಾಹಾಕಾರ ಎದುರಾಗಿದೆ. ರಾಷ್ಟ್ರ ಮತ್ತು ರಾಜ್ಯದ ಅಭಿವೃದ್ಧಿಗೆ ಮಾಜಿ ಪ್ರಧಾನಿ ದೇವೇಗೌಡರ ಕೊಡುಗೆ ಅಪಾರ. ವಿ.ಸೋಮಣ್ಣ ಅಭಿವೃದ್ಧಿಯ ಪರವಾದ ಜನಸ್ನೇಹಿ ನಾಯಕ. ತುಮಕೂರು ಜಿಲ್ಲೆಯನ್ನ ಅಭಿವೃದ್ಧಿಗೆ ಅವರ ಕೊಡುಗೆ ನೀಡ್ತಾರೇ ಎಂದು ಹೇಳಿದರು.

ತುಮಕೂರು ಗ್ರಾಮಾಂತರ ಶಾಸಕ ಬಿ.ಸುರೇಶಗೌಡ ಮಾತನಾಡಿ ಕೊರಟಗೆರೆ ಕ್ಷೇತ್ರದ ಕಾರ್ಯಕರ್ತರು ಎಂಎಲ್‌ಎ ಸೋಲಿನ ಸೇಡು ಎಂಪಿ ಚುನಾವಣೆಯಲ್ಲಿ ತೀರಿಸಿ, ಸುಧಾಕರಲಾಲ್ ಮತ್ತು ಅನಿಲ್‌ಕುಮಾರ್ ಸೇರಿದ್ರೇ ಕುರುಕ್ಷೇತ್ರವೇ ಮೀರಿಸುವ ಪ್ರಬಲ ಶಕ್ತಿಯೇ ಸೃಷ್ಟಿಯಾಗುತ್ತೇ. ಕೋರಾ ಮತ್ತು ಕೋಳಾಲ ಕ್ಷೇತ್ರದಲ್ಲಿ ನಾನು ಕಾರ್ಯಕರ್ತರ ಜೊತೆಗಿದ್ದೀನಿ. ಪಾಕಿಸ್ತಾನ ಜಿಂದಾಬಾದ್ ಎಂದೋರಿಗೆ ಕಾಂಗ್ರೆಸ್ ಪಕ್ಷ ಬೆಂಬಲ ನೀಡುತ್ತೇ ಎಂದು ಆರೋಪ ಮಾಡಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ನರೇಂದ್ರಬಾಬು, ಕೊರಟಗೆರೆ ಬಿಜೆಪಿ ಮಂಡಲ ಅಧ್ಯಕ್ಷ ದರ್ಶನ್, ಜಿಲ್ಲಾಧ್ಯಕ್ಷ ಹನುಮಂತೇಗೌಡ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ವೀರಕ್ಯಾತರಾಯ, ಬಿಜೆಪಿ ಯುವಧ್ಯಕ್ಷ ಶಿವಕುಮಾರ್, ಮಾಜಿ ಜಿಪಂ ಸದಸ್ಯ ಶಿವರಾಮಯ್ಯ, ಪವನಕುಮಾರ್, ಡಾ.ಲಕ್ಷ್ಮೀಕಾಂತ, ಗುರುಧರ್, ಶ್ರೀನಿವಾಸ, ಮಾಜಿ ತಾಪಂ ಸದಸ್ಯ ಎಲ್.ವಿ.ಪ್ರಕಾಶ್, ಪಪಂ ಸದಸ್ಯ ಪುಟ್ಟನರಸಪ್ಪ, ರಮೇಶ್, ದಾಸಲುಕುಂಟೆ ರಘು, ವೆಂಕಟೇಶ್, ಸಿ.ಬಿ.ರಂಗಮ್ಮ ಸೇರಿದಂತೆ ಇತರರು ಇದ್ದರು.



ಭಾರತದಲ್ಲಿ 400ಕ್ಕೂ ಅಧಿಕ ಲೋಕಸಭಾ ಸೀಟ್ ಗೆಲ್ಲುವುದೇ ನಮ್ಮ ನರೇಂದ್ರಮೋದಿ ಗ್ಯಾರಂಟಿ. ಕರ್ನಾಟಕದ 28 ಕ್ಷೇತ್ರದಲ್ಲೂ ಮತ್ತೇ ಕಾಂಗ್ರೆಸ್ ಸೋಲುವುದೇ ಸಿದ್ಧರಾಮಯ್ಯ ಗ್ಯಾರಂಟಿ. ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ಮತ್ತು ಕಾರ್ಯಕರ್ತರು ಒಂದಾಗಿ ಕೆಲಸ ಮಾಡ್ತೀವಿ. ಮೈತ್ರಿಕೂಟದ ವಿ.ಸೋಮಣ್ಣ ಗೆಲುವಿಗೆ ಮಧುಗಿರಿ ಮತ್ತು ಕೊರಟಗೆರೆ ಕ್ಷೇತ್ರದಿಂದ ಅತಿಹೆಚ್ಚು ಮತಗಳ ಲೀಡ್ ನೀಡ್ತೆವೆ.

–ಅನಿಲ್‌ಕುಮಾರ್.ಬಿ.ಹೆಚ್. ಬಿಜೆಪಿ ಮುಖಂಡ. ಕೊರಟಗೆರೆ

ನಮ್ಮೇಲ್ಲರ ಆಚ್ಚುಮೆಚ್ಚಿನ ವಿ.ಸೋಮಣ್ಣ ಲೋಕಸಭಾ ಸದಸ್ಯರಾಗಿ ಏಚಿತವಾಗಿ ಆಯ್ಕೆ ಆಗ್ತಾರೇ. ಸದಸ್ಯರಾಗಿ ಆಯ್ಕೆಯಾದ ನಂತರ ನಮ್ಮ ಕೊರಟಗೆರೆ ಕ್ಷೇತ್ರದ ಜೆಡಿಎಸ್ ಕಾರ್ಯಕರ್ತರ ನೇರಳಾಗಿ ನಿಲ್ಲಬೇಕಿದೆ. ವಿಶ್ವನಾಯಕ ನರೇಂದ್ರಮೋದಿ ಮತ್ತೇ ಪ್ರಧಾನಿ ಆಯ್ಕೆಗೆ ಜನರಿಂದಲೇ ಒಗ್ಗಟ್ಟು ಪ್ರದರ್ಶನ ಆಗಿದೆ. ನಾವು ಕೊರಟಗೆರೆ ಕ್ಷೇತ್ರದಲ್ಲಿ ಒಟ್ಟಾಗಿ ವಿ.ಸೋಮಣ್ಣ ಪರವಾಗಿ ನಿಲ್ಲಬೇಕಿದೆ.

–ಪಿ.ಆರ್.ಸುಧಾಕರಲಾಲ್. ಮಾಜಿ ಶಾಸಕ. ಕೊರಟಗೆರೆ.

ಮೈತ್ರಿ ಕಾರ್ಯಕರ್ತರ ಬೈಕ್ ರ‍್ಯಾಲಿ

ತುಮಕೂರು ಲೋಕಸಭಾ ಅಭ್ಯರ್ಥಿ ವಿ.ಸೋಮಣ್ಣ ಕೊರಟಗೆರೆ ಪಟ್ಟಣದ ಕಟ್ಟೇಗಣಪತಿಗೆ ಪ್ರಥಮಪೂಜೆ ಸಲ್ಲಿಸಿದ ನಂತರ ಪಂಚಾಜನ್ಯ ಕಚೇರಿಯಿಂದ ಶಾಸಕ ಸುರೇಶ್‌ಗೌಡ, ಮಾಜಿ ಪಿ.ಆರ್. ಸುಧಾಕರಲಾಲ್, ಬಿಜೆಪಿ ಮುಖಂಡ ಅನಿಲ್‌ಕುಮಾರ್ ಮತ್ತು ಮಂಡಲ ಅಧ್ಯಕ್ಷ ದರ್ಶನ್ ಸೇರಿದಂತೆ ಸಾವಿರಾರು ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರ ಜೊತೆಗೂಡಿ ಬೈಕ್ ರ‍್ಯಾಲಿ ಮೂಲಕ ಸಮಾವೇಶದ ವೇದಿಕೆಗೆ ಆಗಮಿಸಿದರು.

ಋಣಕಾತ್ ಹಣದಿಂದ ದಿನಸಿ ಕಿಟ್ ವಿತರಣೆ



ತುಮಕೂರು: ನಾಡಿನಾದ್ಯಂತ ಮುಸ್ಲಿಂ ಭಾಂದವರು ಪವಿತ್ರ ರಂಜಾನ್ ಉಪವಾಸ ಕೈಗೊಂಡಿದ್ದು ಶ್ರದ್ಧಾ, ಭಕ್ತಿಯಿಂದ ವ್ರತ ಆಚಾರಣೆ ಮಾಡುತ್ತಿದ್ದು ಈ ನಿಟ್ಟಿನಲ್ಲಿ ಮುಸ್ಲಿಂ ಸಮುದಾಯದ ಬಡವರು, ನಿರ್ಗತಿಕರಿಗೆ ರೆಸ್ಪಾನ್ಸಿವ್ ಕೇರ್ ಫೌಂಡೇಶನ್ ವತಿಯಿಂದ ದಿನಸಿ ಕಿಟ್ ವಿತರಣೆ ಮಾಡಲಾಯಿತು. ಜಿಲ್ಲೆಯ ಗುಬ್ಬಿ ತಾಲೂಕಿನ ಕೆ.ಜಿ ಟೆಂಪಲ್ ಗ್ರಾಮದಲ್ಲಿ ಬಡವರಿಗೆ, ನಿರ್ಗತಿಕರಿಗೆ ಋಣಕಾತ್ ಹಣದಿಂದ ಸಹಾಯ ಮಾಡುವ ನಿಟ್ಟಿನಲ್ಲಿ ಮುಸ್ಲಿಂ ಸಮುದಾಯದ ಜನರಿಂದ ರೆಸ್ಪಾನ್ಸಿವ್ ಕೇರ್ ಫೌಂಡೇಶನ್ ವತಿಯಿಂದ ಋಣಕಾತ್ ಹಣವನ್ನು ಸಂಗ್ರಹಿಸಿ ದಿನನಿತ್ಯ ಬಳಸುವ ದಿನಸಿಕಿಟ್ ಗಳು ವಿತರಿಸಿದರು. ಈ ಸಂದರ್ಭದಲ್ಲಿ ರೆಸ್ಪಾನ್ಸಿವ್ ಕೇರ್ ಫೌಂಡೇಶನ್ ಅಧ್ಯಕ್ಷರಾದ ರಹಮತ್ ಅಲಿ, ನಿರ್ದೇಶಕರಾದ ಮೋಯಿನುದ್ದೀನ್ ರಹ್ಮಾನ್, ಪತ್ರಕರ್ತರಾದ ಸೈಯದ್ ಯೂಸುಫ್ ಉಲ್ಲಾ, ಸೇರಿದಂತೆ ಮತ್ತಿತರರು ಇದ್ದರು.

ಮತದಾನದಿಂದ ಸುಭದ್ರ ಪ್ರಜಾಪ್ರಭುತ್ವ ರಾಷ್ಟ್ರ ನಿರ್ಮಾಣ ಸಾಧ್ಯ

■ ಕಾಯಕಯೋಗಿ ಸುದ್ದಿ

ಕೊರಟಗೆರೆ : ಮತ ಚಲಾಯಿಸುವುದು ಕೇವಲ ನಿಮ್ಮ ಹಕ್ಕು ಮಾತ್ರವಲ್ಲ. ಅದು ದೇಶಕಟ್ಟುವ ನಿಟ್ಟನಲ್ಲಿ ಕರ್ತವ್ಯ ಕೂಡ ಆಗಿದೆ. ಜಗತ್ತಿನಲ್ಲೇ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಅಪ್ಪಿಕೊಂಡ ದೊಡ್ಡ ದೇಶ ನಮ್ಮದು ಎಂದು ತಾ.ಪಂ ಇಒ ಅಪೂರ್ವ ತಿಳಿಸಿದರು.

ಲೋಕಸಭಾ ಚುನಾವಣೆ ಅಂಗವಾಗಿ ಜಿಲ್ಲಾ ಸ್ವೀಪ್ ಸಮಿತಿ ಮತ್ತು ತಾಲೂಕು ಸ್ವೀಪ್ ಸಮಿತಿ, ಯೂತ್ ಫಾರ್ ಸೇವಾ ಸಂಸ್ಥೆ ಹಾಗೂ ಬೂದಗವಿ, ತುಂಬಾಡಿ, ತೋವಿನಕೆರೆ ಗ್ರಾಪಂ ಸಹಯೋಗದೊಂದಿಗೆ ಬೂದಗವಿ ಗ್ರಾಮ ಸೇರಿದಂತೆ ಸಿದ್ದರಬೆಟ್ಟದ ಅರಣ್ಯ ಪ್ರದೇಶದಲ್ಲಿ ಸ್ವಚ್ಛತಾ ಅಭಿಯಾನದ ಮೂಲಕ ಏಪ್ರಿಡಿ ಸರಾದ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಈ ಬಾರಿ ಶೇ.100ರಷ್ಟು ಮತದಾನಕ್ಕೆ ಮುಂದಾಗಬೇಕಿದೆ. ಈ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಆಡಳಿತ ವ್ಯವಸ್ಥೆಯನ್ನು ಸುಧಾರಿಸುವ, ಅಭಿವೃದ್ಧಿಗಾಗಿ ಪ್ರೂಪವಾಗಿ ಚುನಾವಣೆಗಳು ಅತಿ ಮಹತ್ವರ ಪಾತ್ರ ವಹಿಸುತ್ತವೆ. ಮತದಾರರು ಪ್ರಮಾಣಿಕ, ನ್ಯಾಯಸಮ್ಮತ, ನಿಷ್ಪಕ್ಷಪಾತವಾಗಿ ಮತದಾನ ಮಾಡಬೇಕು. ಪ್ರತಿಯೊಬ್ಬರು ಮತದಾನ ಮಾಡಿದಾಗ ಮಾತ್ರ ಸುಭದ್ರ ಪ್ರಜಾಪ್ರಭುತ್ವ ರಾಷ್ಟ್ರ ನಿರ್ಮಾಣವಾಗಲು ಸಾಧ್ಯ ಎಂದರು.



ಈ ಕಾರ್ಯಕ್ರಮದಲ್ಲಿ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು, ಬೂದಗವಿ ಮತ್ತು ತುಂಬಾಡಿ-ತೋವಿನಕೆರೆ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ಸ್ವಸಹಾಯ ಸಂಘದ ಮಹಿಳೆಯರು, ನರೇಗಾ ಹಾಗೂ ತಾ.ಪಂ ಇದ್ದರು.

ಏ.26 ರಂದು ನಡೆಯಿವ ಲೋಕ ಸಭಾ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ಮತದಾನ ಮಾಡುವಂತೆ ಮತದಾರರಿಂದ ಪ್ರತಿಜ್ಞಾವಿಧಿಯನ್ನು ಭೋಧಿಸಿದರು.

ಬೂದಗವಿ ಗ್ರಾಮ ಪಂಚಾಯಿತಿ ಆವರಣ ದಿಂದ ಬೂದಗವಿ ಗ್ರಾಮದ ಪ್ರತಿ ಮನೆ ಮನೆಗೆ ತೆರಳಿ ಕಸ ಸಂಗ್ರಹಿಸಿ ನಮ್ಮ ಮನೆ ನಮ್ಮ ಗ್ರಾಮ ಎಂಬ ಭಾವನೆಯನ್ನು ಬೆಳೆಸಿಕೊಂಡು ಪರಿಸರ ಮಾಲಿನ್ಯಕ್ಕೆ ಮಾರಕ ವಾದಂತಹ ವಸ್ತುಗಳನ್ನು ಸ್ವಚ್ಛಗೊಳಿಸಿ ಉತ್ತಮ ಆರೋಗ್ಯಕರ ವಾತಾವರಣವನ್ನು ಕಂಡುಕೊಳ್ಳಿ ಎಂದು ಹೇಳುವುದರ ಜೊತೆಗೆ ಕಡ್ಡಾಯವಾಗಿ ಮತದಾನ ಮಾಡುವಂತೆ ತಾಲೂಕು ಸ್ವೀಪ್ ಸಮಿತಿ ತಿಳಿಸಲಾಯಿತು.

ಮತ್ತು ಗ್ರಾಪಂ ಸಿಬ್ಬಂದಿ ಸೇರಿದಂತೆ ಇತರರು ಇದ್ದರು.

ಗ್ರಾಮಗಳಲ್ಲಿ ಕುಡಿಯುವ ನೀರು,ಮೇವಿಗೆ ತೊಂದರೆ ಆಗದಂತೆ ಎಚ್ಚರಿಕೆ ವಹಿಸಿ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:ಹನೂರು ತಾಲೂಕಿನ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಹಾಗೂ ಜಾನುವಾರುಗಳಿಗೆ ಮೇವಿನ ತೊಂದರೆಯಾಗದಂತೆ ಕ್ರಮ ಕೈಗೊಳ್ಳಿ ಎಂದು ಕೊಳ್ಳೇಗಾಲ ಉಪ ವಿಭಾಗಾಧಿಕಾರಿ ಶಿವಮೂರ್ತಿ ಹೇಳಿದರು.

ಪಟ್ಟಣದ ನಾಡಕಚೇರಿ ಹಾಗೂ ಪಶು ಇಲಾಖೆಯ ಕಚೇರಿಗಳಿಗೆ ಭೇಟಿ ನೀಡಿ ಕಡತ ಪರಿಶೀಲನೆ ನಡೆಸಿ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು.

ತಾಲೂಕಿನ ಯಾವುದೇ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಸಂಬಂಧ ಪಟ್ಟಂತೆ ಹಾಗೂ ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಅಧಿಕಾರಿಗಳು ಗಮನಹರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು, ಮುಂದಿನ ದಿನಗಳಲ್ಲಿ ಅಂತರ್ಜಲ ಮಟ್ಟ ಕುಸಿದು ಕುಡಿಯುವ ನೀರಿನ ಸಮಸ್ಯೆ ಬರಬಹುದು ಎಂದು ಕಂಡುಬಂದರೆ ಆ ಗ್ರಾಮಗಳ ಪಟ್ಟಿಯನ್ನು ಸಿದ್ಧಪಡಿಸಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಾರದಂತೆ ಸೂಕ್ತ ಕ್ರಮ ಮೆಗೊಳಬೇಕು ಎಂದರು.

ಮೇವಿನ ಕೊರತೆ ನೀಗಿಸಿ : ಪಶು ವೈದ್ಯಾಧಿಕಾರಿ ಸಿದ್ದರಾಜು ಅವರ ಜೊತೆಗೆ ಸಭೆ ನಡೆಸಿದ ಉಪ ವಿಭಾಗಾಧಿಕಾರಿಗಳು ತಾಲೂಕಿನಲ್ಲಿ ಮೇವಿಗೆ ಕೊರತೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ತೊಳಸಿಕೆರೆ ಗ್ರಾಮಕ್ಕೆ ಭೇಟಿ : ತೊಳಸಿಕೆರೆ ಗ್ರಾಮಸ್ಥರು ಚುನಾವಣೆ ಬಹಿಷ್ಕಾರ ಮಾಡಿರುವ ಹಿನ್ನೆಲೆ ಅಲ್ಲಿಗೆ ತಾಲೋಕು ಮಟ್ಟದ ಅಧಿಕಾರಿಗಳು ಸೋಮವಾರ ಭೇಟಿ ನೀಡಿ ಅವರ ಸಮಸ್ಯೆ ಆಲಿಸಿ ಅವರು ಚುನಾವಣೆ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವಂತೆ ಪ್ರೇರಣೆ ನೀಡಬೇಕು ಎಂದರು.



ಹಳೆಯ ಕಟ್ಟಡ ದುರಸ್ಥಿಗೆ ಕ್ರಮ : ತಹಶೀಲ್ದಾರ್ ಕಚೇರಿ ಬಳಿ ಇರುವ ಗ್ರಂಥಾಲಯಕ್ಕೆ ಬೇಟಿ ನೀಡಿ ಗ್ರಂಥಾಲಯದ ಕಟ್ಟಡ ಹಳೆಯದಾಗಿದ್ದು ಇದನ್ನು ಕೆಡವಲು ನೂತನವಾಗಿ ನಿರ್ಮಿಸಲು ಕ್ರಮ ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೆ ಸಂದರ್ಭದಲ್ಲಿ ಹನೂರು ತಹಶೀಲ್ದಾರ್ ಗುರುಪ್ರಸಾದ್,ಪಶು ವೈದ್ಯಾಧಿಕಾರಿ ಡಾ ಸಿದ್ದರಾಜು, ತಾಲ್ಲೂಕು ಪಂಚಾಯತಿ ಇ ಒ ಉಮೇಶ್, ತಹಶೀಲ್ದಾರ್ ರಂಜಿತ್, ಸಿರಸ್ತೆದಾರ್ ಗಳಾದ ನಾಗೇಂದ್ರ, ಮಹದೇವ ನಾಯಕ ಕಂದಾಯ ನಿರೀಕ್ಷಕ ಪಿಪಿ ಮಾದೇಶ್, ಗ್ರಾಮ ಆಡಳಿತಾಧಿಕಾರಿ ಗಳಾದ ಶೇಷ್ಣೂ ರಾಹುಲ್, ಕಾವ್ಯ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಮೂವರು ಅಭ್ಯರ್ಥಿಗಳಿಂದ 4 ನಾಮಪತ್ರ ಸಲ್ಲಿಕೆ



■ ಕಾಯಕಯೋಗಿ ಸುದ್ದಿ

ಚಾಮರಾಜನಗರ:– ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ನಾಮಪತ್ರ ಸಲ್ಲಿಸಲು ಎರಡನೇ ದಿನವಾದ ಶನಿವಾರ ಮೂವರು ಅಭ್ಯರ್ಥಿಗಳಿಂದ 4 ನಾಮಪತ್ರಗಳು ಸಲ್ಲಿಕೆಯಾಗಿವೆ.

22-ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರದಿಂದ 2024ರ ಸಾರ್ವತ್ರಿಕ ಚುನಾವಣೆಗೆ ಸೋಷಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಪಕ್ಷದ ಅಭ್ಯರ್ಥಿಯಾಗಿ ಸುಮ.ಎಸ್. ಅವರು ಎರಡು ನಾಮಪತ್ರಗಳನ್ನು ಸಲ್ಲಿಸಿದ್ದಾರೆ.

ಪಕ್ಷೇತರ ಅಭ್ಯರ್ಥಿಯಾಗಿ ಪ್ರದೀಪ್ ಕುಮಾರ್. ಎಂ ಹಾಗೂ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿಯಾಗಿ ಮಹೇಶ. ಎಂ ಅವರು ತಲಾ ಒಂದು ನಾಮಪತ್ರ ಸಲ್ಲಿಸಿದ್ದಾರೆ. ಒಟ್ಟಾರೆ ಇದುವರೆಗೆ ನಾಲ್ಕು ಅಭ್ಯರ್ಥಿಗಳಿಂದ ಐದು ನಾಮಪತ್ರಗಳು ಸಲ್ಲಿಕೆಯಾಗಿವೆ.

ಅದರೊಂದಿಗೆ ಸಲ್ಲಿಸಿರುವ ಅಫಿಡವಿಟ್ ಪ್ರತಿಯನ್ನು ಭಾರತ ಚುನಾವಣಾ ಆಯೋಗದ ವೆಬ್‌ಸೈಟ್ https://affidavit.eci.gov.in ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆ ಮತ್ತು ಚುನಾವಣಾಧಿಕಾರಿಗಳ ಕಾರ್ಯಾಲಯದ ಸೂಚನಾ ಫಲಕದಲ್ಲಿ ನಾಮಪತ್ರದ ನಕಲು ಪ್ರತಿ ಮತ್ತು ಅಫಿಡವಿಟ್ ಅನ್ನು ಪ್ರಚುರ ಪಡಿಸಲಾಗಿದೆ ಎಂದು ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಗೀತಾ ಹುಡೇದ ಅವರು ಉಪಸ್ಥಿತರಿದ್ದರು.

ಉತ್ತಮ ಅಭ್ಯರ್ಥಿ ಆಯ್ಕೆಗಾಗಿ ಎಲ್ಲರೂ ತಪ್ಪದೇ ಮತದಾನ ಮಾಡಿ



ಚಾಮರಾಜನಗರ:– ಸಾರ್ವತ್ರಿಕ ಲೋಕಸಭಾ ಚುನಾವಣೆಯ ಮತದಾನ ಜಿಲ್ಲೆಯಲ್ಲಿ ಏಪ್ರಿಲ್ 26ರಂದು ನಡೆಯಲಿದ್ದು, ಉತ್ತಮ ಅಭ್ಯರ್ಥಿಯ ಆಯ್ಕೆಗಾಗಿ ಎಲ್ಲರೂ ತಪ್ಪದೇ ಕಡ್ಡಾಯವಾಗಿ ಮತದಾನ ಮಾಡುವಂತೆ ಅಜ್ಜೀಪುರ ಗ್ರಾಮ ಪಂಚಾಯತಿ ಕಾರ್ಯದರ್ಶಿ ಶ್ರೀನಿವಾಸ ಅವರು ತಿಳಿಸಿದರು.

ಹನೂರು ತಾಲೂಕಿನ ಅಜ್ಜೀಪುರ ಗ್ರಾಮ ಪಂಚಾಯತಿಯಲ್ಲಿ ನಡೆದ ತಾಲೂಕು ಸ್ವೀಪ್ ಸಮಿತಿಯಿಂದ ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–5 | 31–03–2024

ಹಾಸನ–ರಾಮನಗರ

ನರೇಗಾ ಕೂಲಿ ಸ್ಥಳದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ



■ ಕಾಯಕಯೋಗಿ ಸುದ್ದಿ

ರಾಮನಗರ: ಮತದಾನಕ್ಕಿಂತ ಮತ್ತೊಂದು ದಾನ ಯಾವುದು ದೊಡ್ಡದಿಲ್ಲ; ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ಮನು ಪಿ. ಕೆ. ಅವರು ತಿಳಿಸಿದರು.

ಅವರು ಇಂದು ಚನ್ನಪಟ್ಟಣ ತಾಲ್ಲೂಕಿನ ಎರೆತೋಟದ ಗ್ರಾಮಪಂಚಾಯಿತಿ ವ್ಯಾಪ್ತಿಯ ಅಳಹಳ್ಳಿ ಗ್ರಾಮದಲ್ಲಿ ಸಾರ್ವತ್ರಿಕ ಲೋಕಸಭಾ ಚುನಾವಣೆ 2024ರ ಚಟುವಟಿಕೆ ಭಾಗವಾಗಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಸಕ್ರಿಯವಾಗಿ ಕೆಲಸ ನಿರ್ವಹಿಸುತ್ತಿರುವ ಕೂಲಿಕಾರರಿಗೆ ಕೆಲಸದ ಸ್ಥಳದಲ್ಲಿ ಮತದಾನ ಮಹತ್ವವನ್ನು ಕುರಿತು ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮವನ್ನಕ್ಕೆ ಚಾಲನೆ ನೀಡಿ ಮಾತನಾಡಿದರು.

ಮಹಿಳೆಯರಿಂದ ರಂಗೋಲಿ ಸ್ಪರ್ಧೆ ಕಾರ್ಯಕ್ರಮ ಹಾಗೂ ಜಾಥ ಕಾರ್ಯಕ್ರಮ ಮಾಡಿಸುವುದರ ಮೂಲಕ ಜಾಗೃತಿ ಮೂಡಿಸಿದರು. ಇದೇ ಸಂದರ್ಭದಲ್ಲಿ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಸಿದ್ಧರಾಜು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀಕಾಂತ್, ಸಂಜೀವಿನಿ ಒಕ್ಕೂಟದ ಸಿಬ್ಬಂದಿಗಳಾದ ಹರೀಶ್ ಬಾಬು, ಹೇಮತ್, ತಾಲ್ಲೂಕು ಐಇಸಿ ಸಂಯೋಜಕರಾದ ಭವ್ಯ, ಗ್ರಾಮ ಕಾಯಕ ಮಿತ್ರರು, ಬಿಎಫ್‌ಟಿ, ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಹಾಗೂ ಕೂಲಿಕಾರ್ಮಿಕರು ಉಪಸ್ಥಿತರಿದ್ದರು.

ಹಾಸನ ಲೋಕಸಭಾ ಕ್ಷೇತ್ರ: 1 ನಾಮಪತ್ರ ಸಲ್ಲಿಕೆ

■ ಕಾಯಕಯೋಗಿ ಸುದ್ದಿ

ಹಾಸನ: ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ಸಂಬಂಧಿಸಿ ಹಾಸನ ಲೋಕಸಭಾ ಕ್ಷೇತ್ರದ ಚುನಾವಣೆಗೆ ಶನಿವಾರ ಒಬ್ಬರು ಅಭ್ಯರ್ಥಿ ನಾಮಪತ್ರ ಸಲ್ಲಿಸಿದ್ದಾರೆ.

ಎಚ್.ಡಿ. ರೇವಣ್ಣ(ಪೂರ್ವಾಂಚಲ ಮಹಾಪಂಚಾಯತ್ ಪಕ್ಷ) ಅವರು ಚುನಾವಣಾಧಿಕಾರಿ ಸಿ. ಸತ್ಯಭಾಮಾ ಅವರಿಗೆ ನಾಮಪತ್ರವನ್ನು ಸಲ್ಲಿಸಿದರು. ಇದುವರೆಗೆ ಹಾಸನ ಲೋಕಸಭಾ ಕ್ಷೇತ್ರದಲ್ಲಿ 4 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.

ನಾಮಪತ್ರ ಸಲ್ಲಿಕೆಗೆ ಏಪ್ರಿಲ್ 4 ಕೊನೆಯ ದಿನವಾಗಿದೆ. ಏ.5ರಂದು ನಾಮಪತ್ರ ಪರಿಶೀಲನೆ, ಏ.8ರಂದು ನಾಪಪತ್ರ ವಾಪಸ್ ಪಡೆಯಲು ಕೊನೆಯ ದಿನ. ಏ.26ರಂದು ಚುನಾವಣಾ ಮತದಾನ ನಡೆಯಲಿದೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಪ್ರತಿದಿನ ಬೆಳಗ್ಗೆ 11ರಿಂದ ಮಧ್ಯಾಹ್ನ 3 ಗಂಟೆಯೊಳಗೆ ನಾಮಪತ್ರ ಸಲ್ಲಿಕೆ ಮಾಡಬಹುದು.

ಬಿಜೆಪಿ ಅಭ್ಯರ್ಥಿ ಗಂಗಾಧರ್ ಬಹುಜನ್‌ಗೆ ಮತ ನೀಡಿ: ಕೃಷ್ಣಮೂರ್ತಿ ಮನವಿ

■ ಕಾಯಕಯೋಗಿ ಸುದ್ದಿ

ಚನ್ನರಾಯಪಟ್ಟಣ: ಹಾಸನ ಲೋಕಸಭಾ ಕ್ಷೇತ್ರದ ಬಿಎಸ್ಪಿ ಅಭ್ಯರ್ಥಿ ಗಂಗಾಧರ್ ಬಹುಜನ್ ಚನ್ನರಾಯಪಟ್ಟಣ ಪ್ರಮುಖ ಬೀದಿಗಳಲ್ಲಿ ರೋಡ್ ಶೋ ನಡೆಸಿದರು.

ಅನಂತರ ಶ್ರೀ ಆಂಜನೇಯ ದೇವಸ್ಥಾನದ ಮುಂಭಾಗ ಬಿಎಸ್ಪಿ ಪಕ್ಷದ ಚುನಾವಣಾ ಪ್ರಚಾರ ಕಾರ್ಯಕ್ರಮ ನಡೆಯಿತು.ಈ ಕಾರ್ಯಕ್ರಮದ ಉದ್ಘಾಟನೆಯನ್ನು ಬಿ ಎಸ್ ಪಿ ಪಕ್ಷ ರಾಜ್ಯ ಉಸ್ತುವಾರಿಗಳಾದ ಮಂಡ್ಯ ಕೃಷ್ಣಮೂರ್ತಿ ಉದ್ಘಾಟಿಸಿ ಮಾತನಾಡಿದರು.

ಕಳೆದ 70 ವರ್ಷಗಳ ಕಾಲ ಕಾಂಗ್ರೆಸ್, ಬಿಜೆಪಿ, ಜನತಾದಳಗಳಿಗೆ ಮತ ನೀಡಿದ್ದೀರಾ ಆದರೆ ನಿಮ್ಮೆಲ್ಲರಿಗೆ ಇದುವರೆಗೂ ಭೂಮಿಯನ್ನು ಸಮಾನವಾಗಿ ಹಂಚಿಕೆ ಮಾಡಿಲ್ಲ. ನಿಮ್ಮ ಮಕ್ಕಳಿಗೆ ಉದ್ಯೋಗಗಳನ್ನು ಸೃಷ್ಟಿ ಮಾಡಿಲ್ಲ. ಎಲ್ಲಾ ಸಮಾಜದ ಬಡವರಿಗೆ ಉಚಿತ ಆರೋಗ್ಯ ಸೇವೆಯನ್ನು ಒದಗಿಸಿಲ್ಲ ಇಂತಹ ಬಡವರ ವಿರೋಧಿ ಪಕ್ಷ ಗಳಾದ ಕಾಂಗ್ರೆಸ್, ಬಿಜೆಪಿ ,ಜೆಡಿಎಸ್ ಪಕ್ಷಗಳನ್ನು ತಿರಸ್ಕಾರ ಮಾಡಿ ಈ ಬಾರಿ ಹಾಸನ ಲೋಕಸಭಾ ಕ್ಷೇತ್ರದ ಬಹುಜನ ಸಮಾಜ



ಪಕ್ಷದ ಅಭ್ಯರ್ಥಿಯಾದ ಗಂಗಾಧರ್ ಬಹುಜನ್ ಅವರಿಗೆ ಮತ ನೀಡುವ ಮೂಲಕ ನಿಮ್ಮೆಲ್ಲರ ಸೇವೆ ಮಾಡುವ ಅವಕಾಶವನ್ನು ಕಲ್ಪಿಸಿ ಕೊಡಬೇಕೆಂದು ಮನವಿ ಮಾಡಿದರು.

ಕಾರ್ಯಕರ್ತರನ್ನು ಉದ್ದೇಶಿಸಿ ಹಾಸನ ಲೋಕಸಭಾ ಕ್ಷೇತ್ರದ ಬಿಎಸ್ಪಿ ಅಭ್ಯರ್ಥಿ ಹಾಗೂ ಬಿ ಎಸ್ ಪಿ ಪಕ್ಷದ ರಾಜ್ಯ ಉಪಾಧ್ಯಕ್ಷರಾದ ಗಂಗಾಧರ್ ಬಹುಜನ್ ಮಾತನಾಡಿ ಹಾಸನ ಜಿಲ್ಲೆಯಲ್ಲಿ ಇದುವರೆಗೂ ಲೋಕಸಭಾ ಸದಸ್ಯರಾಗಿ ಆಯ್ಕೆಯಾಗಿರುವ ಯಾವೊಬ್ಬ ಅಭ್ಯರ್ಥಿಯು ಸಹ ಕಾರ್ಮಿಕರ ಪರವಾಗಿ, ರೈತರ ಪರವಾಗಿ, ದಲಿತರ ಪರವಾಗಿ, ಹಿಂದುಳಿದವರ ಪರವಾಗಿ, ಧಾರ್ಮಿಕ ಅಲ್ಪಸಂಖ್ಯಾತರ ಪರವಾಗಿ ಯಾವುದೇ ತರಹದ ಒಂದೇ ಒಂದು ಹೋರಾಟವನ್ನು ನಡೆಸಿಲ್ಲ , ಹಾಸನ ಜಿಲ್ಲೆಯಲ್ಲಿ ಇದುವರೆಗೂ ಮತಗಳನ್ನು ನೀಡುತ್ತಾ ಬಂದಿರುವ ಸಮಸ್ತ ಮತದಾರರ ಹಿತವನ್ನು ಕಾಯುವುದರಲ್ಲಿ ಸಂಪೂರ್ಣವಾಗಿ ವಿಫಲಗೊಂಡಿದ್ದಾರೆ ಇಂತಹ ಅಭಿವೃದ್ಧಿ ವಿರೋಧಿ ಅಭ್ಯರ್ಥಿ ಗಳನ್ನು ತಿರಸ್ಕಾರ ಮಾಡಿ ಎಂದರು. ಹಾಸನ ಜಿಲ್ಲೆಯ ಬಹುಜನರ ಪರವಾಗಿ ನಿರಂತರವಾಗಿ ಹೋರಾಟ ನಡೆಸುತ್ತಾ ನಾನು ಬಂದಿದ್ದೇನೆ.ನಾನು ಕಳೆದ 25 ವರ್ಷಗಳಿಂದ ಈ ಜಿಲ್ಲೆಯ ಜನಪರವಾದ ಹೋರಾಟಗಳ ಮಾಡುವ ಮೂಲಕ ಎಲ್ಲಾ ಸಮಾಜದ ಬಡವರಿಗೆ ನ್ಯಾಯ ಕೊಡಿಸುವಲ್ಲಿ ಶ್ರಮಿಸಿದ್ದೇನೆ ಎಂಬುದು ನಿಮ್ಮೆಲ್ಲರ ಗಮನದಲ್ಲಿರಲಿ. ನಾನು ನಡೆಸಿರುವ ರೈತರ ಪರವಾದ ಕಾರ್ಮಿಕರ ಪರವಾದ ಬಡವರ ಪರವಾದ ಹೋರಾಟಗಳನ್ನು ಎಲ್ಲ ಮತದಾರರು ಮನದಲ್ಲಿಟ್ಟುಕೊಂಡು ಈ ಬಾರಿ ಹಾಸನ ಲೋಕಸಭಾ ಕ್ಷೇತ್ರದ ಬಹುಜನ ಸಮಾಜ ಪಕ್ಷದ ಆನೆ ಗುರುತಿಗೆ ನಿಮ್ಮೆಲ್ಲರ ಅಮೂಲ್ಯವಾದ ಮತ ನೀಡಬೇಕೆಂದು ವಿನಂತಿ ಮಾಡಿದರು.

ಈ ಕಾರ್ಯಕ್ರಮದಲ್ಲಿ ಬಹುಜನ ಸಮಾಜ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಜಾಕೀರ್ ಹುಸೇನ್, ಜಾಕೀರ್ ಅಲಿಖಾನ್, ಶಿವಮ್ಮ ,ಆತ್ಮಿ ಹರೀಶ್ ಮಾತನಾಡಿದರು. ಇದೇ ಸಂದರ್ಭದಲ್ಲಿ ಹಾಸನ ಲೋಕಸಭಾ ಕ್ಷೇತ್ರದ ಬಿಎಸ್ಪಿ ಅಭ್ಯರ್ಥಿಯಾದ ಗಂಗಾಧರ್ ಬಹುಜನ್, ಬಿಎಸ್ಪಿ ಮುಖಂಡರಾದ ಡಾಕ್ಟರ್ ಕೃಷ್ಣಮೂರ್ತಿ ಮಂಡ್ಯ, ಝಾಕೀರ್ ಹುಸೇನ್, ಝಾಕೀರ್ ಅಲಿಖಾನ್,ಹರೀಶ್, ಶಿವಮ್ಮ, ಸೋಮಶೇಖರ್, ರಾಜು ಕುಂದೂರು, ಸಿದ್ಧ ಲಿಂಗಯ್ಯ, ನಂಜುಂಡಸ್ವಾಮಿ, ಸುರೇಂದ್ರ, ರೂಪ,ಆಟೋ ಲಕ್ಷ್ಮಣ್,ಆನಂದ್,ಉಮೇಶ್, ಸೇರಿದಂತೆ ಇತರರು ಹಾಜರಿದ್ದರು.

ಹುಟ್ಟು–ಸಾವಿನ ನಡುವಿನ ಬದುಕಿನಲ್ಲಿ ಉಳಿಯುವುದೇ ವ್ಯಕ್ತಿತ್ವ

■ ಕಾಯಕಯೋಗಿ ಸುದ್ದಿ

ಕನಕಪುರ: ಮನುಷ್ಯನಿಗೆ ಹುಟ್ಟು ಉಚಿತ, ಸಾವು ಖಚಿತ ಇವೆರಡರ ನಡುವಿನ ಬದುಕಿನಲ್ಲಿ ಉಳಿಯುವುದೇ ಅತನ ವ್ಯಕ್ತಿತ್ವ ಎಂದು ಪರಿಸರ ಪ್ರೇಮಿ ಲಯನ್ಸ್ ಮರಸಪ್ಪ ರವಿ ಹೇಳಿದರು.

ಕನಕಪುರ ನ್ಯಾಯಾಲಯದ ನಿವೃತ್ತ ಸಿಬ್ಬಂದಿಗಳಾದ ಕೋರ್ಟ್ ತಿಮ್ಮ ಶೆಟ್ಟಿ ಅವರಿಗೆ 88 ವರ್ಷ ತುಂಬಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಬದುಕು ನಮ್ಮದೆನ್ನುವ ಭ್ರಮೆ ಬಿಡಿ, ಪರಿಸರ ನನ್ನೆದೆನ್ನುವ ಕಾಳಜಿ ಇರಲೆಂದು ಮರಸಪ್ಪ ಕರೆ ಕೊಟ್ಟರು. ಇದೇ ಸಂದರ್ಭದಲ್ಲಿ ಪರಿಸರ ಪ್ರೇಮಿಗಳ ಅಧ್ಯಕ್ಷರಾದ ನಿವೃತ್ತ ಡಿವೈಎಸ್ಪಿ ಶ್ರೀನಿವಾಸ್ ಮಾತನಾಡುತ್ತಾ ನೂರಾರು ವರ್ಷಗಳು ಆರೋಗ್ಯವಂತರಾಗಿರಲೆಂದು ಹಾರೈಸಿದರು. ಮರಸಪ್ಪ ರವಿ



ಮಲ್ಲಿಗೆ ಗಿಡಗಳನ್ನು ಕೊಟ್ಟು ಹಾರೈಸಿದರು.

ಹಿರಿಯರಾದ ಜಯರಾಮು ಮಾತನಾಡಿ, ಮಳೆಗಾಳಿಗೆ ಗ್ರಾಮದಲ್ಲಿ ಹಿರಿಯರ ಹುಟ್ಟುಹಬ್ಬಕ್ಕೆ ಪರಸಪ್ಪ ರವಿ ಹಸಿರು ಪ್ರೇಮ ಹುಟ್ಟು ಹಾಕುತ್ತಾರೆ. ಅದೊಂದು ಹಸಿರು ಚಿಲುಮೆ ಎಂದು ಕೊಂಡಾಡಿದರು.

ನ್ಯಾಯಾಲಯದ ನಿವೃತ್ತ ತಿಮ್ಮಯ್ಯ ಶೆಟ್ಟಿ, ನಿವೃತ್ತ ಡಿವೈಎಸ್ಪಿ ಶ್ರೀನಿವಾಸ್, ಗೂಳಿ ಮಾದೇವ್, ಜಯರಾಮ್, ದಾಸಪ್ಪ, ರಾಜು..ಕೇಬಲ್ ಕಾಂತ., ಶ್ರೀಧರ್, ಮಂಜುನಾಥ್, ನಾಗರಾಜ್,. ಉಪಸ್ಥಿತರಿದ್ದರು

ವೃತ್ತಿ ಪರತೆ ಕುರಿತು ಒಂದು ದಿನದ ಕಾರ್ಯಾಗಾರ

■ ಕಾಯಕಯೋಗಿ ಸುದ್ದಿ

ಕನಕಪುರ ; ಶ್ರೀಮತಿ ಗೌರಮ್ಮ ಮತ್ತು ಶ್ರೀ ಡಿ.ಕೆ.ಕೆಂಪೇಗೌಡ ಸರ್ಕಾರಿ ಪದವಿ ಕಾಲೇಜಿನ ಅರ್ಥಶಾಸ್ತ್ರ ವಿಭಾಗ, ಐಕ್ಯೂಎಸಿಯ ಆಶ್ರಯದಲ್ಲಿ ಅಂತಿಮ ಬಿ.ಎ. ಹಾಗೂ ಬಿ.ಕಾಂ.ವಿದ್ಯಾರ್ಥಿಗಳಿಗಾಗಿ 'ವೃತ್ತಿಪರತೆ' ಕುರಿತ ಒಂದು ದಿನದ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು.

ಕಾಲೇಜಿನ ಆವರಣದಲ್ಲಿ ಜರುಗಿದ ಕಾರ್ಯಕ್ರಮವನ್ನು ಉದ್ಘಾಟಿಸಿದ ಎಂ.ಎಸ್.ರಾಮಯ್ಯ, ಕಾಲೇಜ್ ಆಫ್ ಬಿಜಿನೆಸ್ ಸ್ಟಡೀಸ್ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ಕೆ.ಪುರುಷೋತ್ತಮ ಮಾತನಾಡಿ, ವೃತ್ತಿಪರತೆ ಎಂಬುದು ಶೈಕ್ಷಣಿಕ ಕ್ಷೇತ್ರದ ಎಲ್ಲಾ ಮಾನವಿಕ ವಿಜ್ಞಾನಗಳಿಗೂ ಅಗತ್ಯವಾಗಿದ್ದು, ತರಗತಿಯಲ್ಲಿ ಕಲಿತ ವಿಚಾರಗಳನ್ನು ಸಂಬಂಧಿಸಿದ ಕ್ಷೇತ್ರಾಧ್ಯಯನದ ಮೂಲಕ ಅರ್ಥೈಸಿಕೊಂಡು ಅದನ್ನು ಸಮಾಜದಲ್ಲಿ ಅನ್ವಯಿಸುವ ಕಾರ್ಯ ಮಾಡಿದಾಗ ಮಾತ್ರವೇ ಆ ಅಧ್ಯಯನಕ್ಕೆ ಅರ್ಥ ಬರುತ್ತದೆ. ಈ ಹಿನ್ನಲೆಯಲ್ಲಿಯೇ ರಾಷ್ಟ್ರೀಯ ಶಿಕ್ಷಣವೃತ್ತಿ ಪರತೆ ಕುರಿತು ಒಂದು ದಿನದ ಕಾರ್ಯಾಗಾರ ನೀತಿಯ ಭಾಗವಾಗಿ ಎಲ್ಲಾ ಶಿಸ್ತುಗಳಿಗೂ 'ವೃತ್ತಿಪರತೆ'ಯನ್ನು ಒಂದು ವಿಷಯವಾಗಿ ಕಡ್ಡಾಯಗೊಳಿಸಲಾಗಿದೆ. ಹಾಗಾಗಿ ವಿದ್ಯಾರ್ಥಿಗಳು ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಕನಕಪುರ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರೂ ಹಾಗೂ ಪ್ರಾಧ್ಯಾಪಕರಾದ ಡಾ.ಎಸ್.ಕೋಮಲ ಮಾತನಾಡಿ, ಅರ್ಥಶಾಸ್ತ್ರ ವಿಷಯದಲ್ಲಿ ವೃತ್ತಿಪರತೆ ಕುರಿತ ಅಧ್ಯಯನಕ್ಕೆ ಇರುವ ಸಾಧ್ಯಾಸಾಧ್ಯತೆಗಳನ್ನು ಕುರಿತು ಹಾಗೂ ವಿಧ್ಯಾರ್ಥಿಗಳು ವೃತ್ತಿಪರತೆಗೆ ಸಂಬಂಧಿಸಿದ ಕ್ಷೇತ್ರಗಳಲ್ಲಿ ಯಾವ ರೀತಿ ಪಾಲ್ಗೊಳ್ಳಬಹುದು ಎಂಬ ವಿಚಾರಗಳನ್ನು ವಿಧ್ಯಾರ್ಥಿಗಳಿಗೆ ತಿಳಿಸಿಕೊಟ್ಟರು.

ಕಾಲೇಜಿನ ಪ್ರಾಂಶುಪಾಲರಾದ ಡಾ.ಕೆ.ಟಿ.ವೆಂಕಟೇಶ್ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿಯೊಂದು ಕ್ಷೇತ್ರದಲ್ಲೂ ವೃತ್ತಿಪರತೆಯ ಅಗತ್ಯತೆ ಹೆಚ್ಚಾಗಿದ್ದು, ವಿದ್ಯಾರ್ಥಿಗಳು ತಮ್ಮ ಕಲಿಕಾ ಹಂತದಲ್ಲಿಯೇ ಹೆಚ್ಚಿನ ಅನುಭವವನ್ನು ವೃತ್ತಿಪರತೆಯ ಮೂಲಕ ಕಂಡುಕೊಳ್ಳಬೇಕು ಎಂದರು.

ಕನಕಪುರದ ರೂರಲ್ ಕಾಲೇಜಿನ ಅರ್ಥಶಾಸ್ತ್ರ ಡಾ.ಎಚ್.ಬಿ.ಅಪ್ಪಾಜಿ, ಉಪನ್ಯಾಸಕರಾದ ಪ್ರಕಾಶ್, ಚಂದ್ರು, ಐಕ್ಯೂಎಸಿಯ ಸಂಯೋಜಕರಾದ ಪುಷ್ಪಂತಾರಡ್ಡಿ ಹಾಗೂ ಕಾಲೇಜಿನ ಬೋಧಕೇತರ ವರ್ಗದವರು ಭಾಗಹಿಸಿದ್ದರು.

ನಿಟ್ಟೂರು: ಸ್ವ ಸಹಾಯ ಸಂಘಗಳಿಗೆ ಮತದಾನ ಅರಿವು

■ ಕಾಯಕಯೋಗಿ ಸುದ್ದಿ

ಹಾಸನ: ಮಹಿಳಾ ಸ್ವ ಸಹಾಯ ಸಂಘಗಳ ಸದಸ್ಯರುಗಳು ಹಾಗೂ ನಿಟ್ಟೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ 18 ವರ್ಗೆ ಮೇಲ್ಪಟ್ಟ ಪ್ರತಿಯೊಬ್ಬ ಸಾರ್ವಜನಿಕರು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯವಾಗಿ ಮತದಾನ ಮಾಡುವಂತೆ ಹಾಸನ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಗಿರೀಶ್ ಹೆಚ್.ಡಿ ತಿಳಿಸಿದ್ದಾರೆ.

ಹಾಸನ ತಾಲ್ಲೂಕು ಪಂಚಾಯಿತಿ ಸ್ವೀಪ್ ಸಮಿತಿ ಹಾಗೂ ಹಾಸನ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಅವರು ನಿಟ್ಟೂರು ಗ್ರಾಮ ಪಂಚಾಯಿತಿಗೆ ತೆರಳಿ ವಿವಿಧ ಸ್ವ ಸಹಾಯ ಸಂಘಗಳನ್ನು ಒಗ್ಗೂಡಿಸುವ ಮೂಲಕ ಅವರಲ್ಲಿ ಮತದಾನ ಅರಿವು ಮೂಡಿಸಿದರು. ಸಾರ್ವಜನಿಕರು, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಿಬ್ಬಂದಿಗಳು ಎಲ್ಲರನ್ನು ಉದ್ದೇಶಿಸಿ ಯಾವುದೇ ಆಸೆ ಆಮಿಷಗಳಿಗೆ ಬಲಿಯಾಗದೆ ಪ್ರತಿಯೊಬ್ಬರೂ



ಮುಕ್ತವಾಗಿ ತಮ್ಮ ಮತದಾನದ ಹಕ್ಕನ್ನು ಏಪ್ರಿಲ್ 26 ರಂದು ಚಲಾಯಿಸುವಂತೆ ತಿಳಿಸಿದರು.

ಸ್ವ ಸಹಾಯ ಸಂಘಗಳ ಮಹಿಳೆಯರಿಗೆ ರಂಗೋಲಿ ಸ್ಪರ್ಧೆ, ಲೆಮನ್ ಮತ್ತು ಓಟದ ಸ್ಪರ್ಧೆ, ಮ್ಯೂಸಿಕಲ್ ಚೇರ್ ಸ್ಪರ್ಧೆ, ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಅವರಲ್ಲಿ ಮತದಾನ ಬಗ್ಗೆ ಅರಿವು ಮೂಡಿಸಲಾಯಿತು ನಂತರ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ನಿಟ್ಟೂರು ಗ್ರಾಮ ಪಂಚಾಯಿತಿಯ ಪ್ರಮುಖ ಬೀದಿಗಳಲ್ಲಿ ಪಂಜಿನ ಮೆರವಣಿಗೆ ಮೂಲಕ ಬ್ಯಾನರ್ ಹಿಡಿದು ಸಾರ್ವಜನಿಕರಲ್ಲಿ ಮತದಾನ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ದಿನೇಶ್ ಸಿ.ಬಿ, ರಂಗಸ್ವಾಮಿ, ನಿಟ್ಟೂರು ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಲ್ಲೇಶಪ್ಪ, ತಾಲ್ಲೂಕು ಎಸ್.ಆರ್.ಎಲ್.ಎಂ ಘಟಕದ ಟಿಪಿಎಂ ವೇಣುಗೋಪಾಲ್ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಹಾಜರಿದ್ದರು.

ಇಂದು ಶನೇಶ್ವರಸ್ವಾಮಿಯ ವಾರ್ಷಿಕೋತ್ಸವ

■ ಕಾಯಕಯೋಗಿ ಸುದ್ದಿ

ಕನಕಪುರ: ಎಸ್ ಕರಿಯಪ್ಪ ರಸ್ತೆ ಬಾಣಂತ ಮಾರಮ್ಮ ಬಡಾವಣೆ ಮೇಗಳ ಬೀದಿಯಲ್ಲಿರುವ ಶ್ರೀ ಶನೇಶ್ವರಸ್ವಾಮಿ ದೇವಸ್ಥಾನದ 25ನೇ ವರ್ಷದ ಶ್ರೀ ಶನೇಶ್ವರಸ್ವಾಮಿಯ ವಾರ್ಷಿಕೋತ್ಸವ ಹಾಗೂ ಶ್ರೀ ಛಾಯಾದೇವಿ ಅಮ್ಮನವರ ಕರಗ ಮಹೋತ್ಸವವನ್ನು ಮಾ.31ರ ಭಾನುವಾರ ಏರ್ಪಡಿಸಲಾಗಿದೆ.

ಮಾ.31ರ ಭಾನುವಾರ ಬೆಳಿಗ್ಗೆ 6 ಗಂಟೆಗೆ ಗಣಪತಿಪೂಜೆ, ಪುಣ್ಯಾಹ, ಅಭಿಷೇಕ, ಕಲಶ ಸ್ಥಾಪನೆ, ಗಣಪತಿ ಹೋಮ, ನವಗ್ರಹ ಹೋಮ, ಶ್ರೀ ಶನೇಶ್ವರಸ್ವಾಮಿ ಹೋಮ, ಶ್ರೀ ಆಂಜನೇಯಸ್ವಾಮಿ ಹೋಮ ಪೂಜೆ, ದೇವರಿಗೆ ಅಲಂಕಾರ, ಮಹಾಮಂಗಳಾರತಿ ಏರ್ಪಡಿಸಲಾಗಿದೆ.

ಸಂಜೆ 4 ಗಂಟೆಗೆ ಟೌನಿನ ಶ್ರೀ ದೇಗುಲ ಮಠದಿಂದ ಶ್ರೀ ಶನೇಶ್ವರಸ್ವಾಮಿ, ಈಶ್ವರನ ವಿಗ್ರಹ, ಕುಣಿತ, ವೀರಗಾಸೆ ಕುಣಿತ ಸಮೇತ, ಹೂ–ಹೊಂಬಾಳೆ ಮಾಡಿಕೊಂಡು ಮಡಿಯಲ್ಲಿ ಕರೆತರುವುದು, ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀ ಶನೇಶ್ವರಸ್ವಾಮಿ ಮತ್ತು ಛಾಯಾದೇವಿ ಹಾಗೂ ಬಾಣಂತ ಮಾರಮ್ಮ ದೇವಿಯ ಮೆರವಣಿಗೆ ನಡೆಯಲಿದೆ. ಪ.ಪಿ/04/24ರಂದು ವಿಶೇಷ ಅಲಂಕಾರ ,ಪೂಜಾ ಕೈಂಕರ್ಯಗಳು ನಡೆಯಲಿವೆ . ನಂತರ ಮಹಾ ಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗ ಹಾಗೂ ಮಧ್ಯಾಹ್ನ 12ಗಂಟೆಯಿಂದ ಅನ್ನ ಸಂತರ್ಪಣೆಯನ್ನು ಏರ್ಪಡಿಸಲಾಗಿದ್ದು, ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಶನೇಶ್ವರ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಅರ್ಚಕರಾದ ಪ್ರಕಾಶ್ ಸ್ವಾಮಿ ಹಾಗೂ ನಗರಸಭಾ ಸದಸ್ಯ ಸ್ಪರ್ಧಿಯೂ ಆದ ಚಂದ್ರು ತಿಳಿಸಿದ್ದಾರೆ.

ಜಾನುವಾರುಗಳಿಗೆ ಕಾಲುಬಾಯಿ ರೋಗ: ಏಪ್ರಿಲ್‌ನಲ್ಲಿ ಲಸಿಕೆ ಅಭಿಯಾನ

■ ಕಾಯಕಯೋಗಿ ಸುದ್ದಿ

ಹಾಸನ: ಜಿಲ್ಲಾ ಪಂಚಾಯತ್, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಹಾಸನ ಇವರ ಸಹಯೋಗದಲ್ಲಿ ಏಪ್ರಿಲ್ 1 ರಿಂದ 30 ರವರೆಗೆ ಹಾಸನ ಜಿಲ್ಲೆಯಾದ್ಯಂತ 5ನೇ ಸುತ್ತಿನ ಕಾಲುಬಾಯಿ ರೋಗದ ಲಸಿಕಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಕಾಲುಬಾಯಿ ರೋಗವು ದನ, ಎಮ್ಮೆ, ಹಂದಿ, ಕುರಿ/ಮೇಕೆ ಮತ್ತು ವನ್ಯ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ–6 | 31–03–2024
ಬೆಂಗಳೂರು

ಜಿದ್ದಾಜಿದ್ದಿಯಾಗಲಿದೆ ಮಂಡ್ಯ ಲೋಕಸಭಾ ಕ್ಷೇತ್ರ

■ ಕಾಯಕಯೋಗಿ ಸುದ್ದಿ

ಮಂಡ್ಯ : ಲೋಕಸಭೆ ಚುನಾವಣೆ ಹತ್ತಿರವಾಗುತ್ತಿದ್ದಂತೆಯೇ ರಾಜ್ಯ ರಾಜಕೀಯ ಅಖಾಡ ರಂಗೇರುತ್ತಿದೆ. ಅದರಲ್ಲೂ ಮಂಡ್ಯ ಲೋಕಸಭಾ ಕ್ಷೇತ್ರವು ಈ ಬಾರಿಯೂ ಸದ್ದು ಮಾಡುವ ಎಲ್ಲಾ ಲಕ್ಷಣಗಳು ಗೋಚರಿಸುತ್ತಿದೆ. ಎನ್‌ಡಿಎ ಮೈತ್ರಿ ಅಭ್ಯರ್ಥಿಯಾಗಿ ಮಾಜಿ ಸಿಎಂ ಹೆಚ್‌ಡಿ.ಕುಮಾರಸ್ವಾಮಿ ಸ್ಪರ್ಧಿಸಿರುವುದು ಇದಕ್ಕೆ ಪ್ರಮುಖ ಕಾರಣವಾಗಿದೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಪುತ್ರ ನಿಖಿಲ್ ಕುಮಾರಸ್ವಾಮಿ ನಿಲ್ಲಿಸಿ ಸುಮಲತಾ ಎದುರು ಸೋಲು ಕಂಡಿದ್ದ ಕುಮಾರಸ್ವಾಮಿ ಇದೀಗ ತಾವೇ ಕಣಕ್ಕೆ ಇಳಿಯುವ ಮೂಲಕ ಒಂದೇ ಏಟಿಗೆ ಎರಡು ಹಕ್ಕಿ ಹೊಡೆಯುವ ತವಕದಲ್ಲಿದ್ದಾರೆ.

ಈ ಬಾರಿಯ ಚುನಾವಣೆಯಲ್ಲಿ ಸುಮಲತಾ ಹಾಗೂ ಕಾಂಗ್ರೆಸ್ ವಿರುದ್ಧ ಸೇಡು ತೀರಿಸಿಕೊಳ್ಳುವ ನಿಟ್ಟಿನಲ್ಲಿ ಎಚ್.ಡಿ.ಕುಮಾರಸ್ವಾಮಿ ರಣತಂತ್ರ ರೂಪಿಸಿದ್ದಾರೆ. ಮತ್ತೊಂದೆಡೆ ಬಿಜೆಪಿ ಟಿಕೆಟ್ ಆಕಾಂಕ್ಷಿ ಹಾಲಿ ಸಂಸದೆ ಸುಮಲತಾ ಮೈತ್ರಿ ಅಭ್ಯರ್ಥಿಯನ್ನು ಬೆಂಬಲಿಸುತ್ತಾರೋ ಅಥವಾ ಪಕ್ಷೇತರವಾಗಿ ನಿಲ್ಲುತ್ತಾರೋ ಎಂಬುದನ್ನು ಇನ್ನೂ ನಿರ್ಧರಿಸಿಲ್ಲ. ಇಂದಿನ ಬೆಂಬಲಿಗರ ಸಭೆಯಲ್ಲಿ ಚರ್ಚಿಸಿ ಅಂತಿಮ ತೀರ್ಮಾನ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

ಹಿಟ್ ಅಂಡ್ ರನ್ ಕೇಸ್

ಇಬ್ಬರ ಸಾವು, ಮಹಿಳೆಗೆ ಗಂಭೀರ ಗಾಯ

■ ಕಾಯಕಯೋಗಿ ಸುದ್ದಿ

ಹಾಸನ: ಚನ್ನರಾಯಪಟ್ಟಣ ತಾಲೂಕಿನ ಶೆಟ್ಟಿಹಳ್ಳಿ ಬೈಪಾಸ್ ನಲ್ಲಿ ಬೆಳಿಗ್ಗೆ ನಡೆದ ಅಪಘಾತದಲ್ಲಿ ಮಾವ–ಅಳಿಯ ಮೃತಪಟ್ಟಿದ್ದು, ಮಹಿಳೆ ಗಂಭೀರ ಗಾಯಗೊಂಡಿದ್ದಾರೆ.

ಅರಸೀಕೆರೆ ತಾಲೂಕು ನಾಗೇನಹಳ್ಳಿ ಗ್ರಾಮದ ಮಧು (35), ಬೇಲೂರು ತಾಲೂಕಿನ ದೇವಿಹಳ್ಳಿ ಗ್ರಾಮದ ಜವರಯ್ಯ (65) ಮೃತರು. ಬೆಂಗಳೂರಿನಿಂದ ಪತ್ನಿ ಗೀತಾ, ಮಾವನ ಜೊತೆ ಕಾರಿನಲ್ಲಿ ಮಧು ಬರುತ್ತಿದ್ದರು.

ಶೆಟ್ಟಿಹಳ್ಳಿ ಬೈಪಾಸ್ ಬಳಿ ಕಾರಿನ ಟೈಯರ್ ಪಂಕ್ಚರ್ ಆಗಿದ್ದು ರಸ್ತೆಯಲ್ಲಿ ಕಾರು ನಿಲ್ಲಿಸಿಕೊಂಡು ಟೈಯರ್ ಚೇಂಜ್ ಮಾಡುತ್ತಿದ್ದರು.

ಈ ವೇಳೆ ಬೆಂಗಳೂರು ಕಡೆಯಿಂದ ವೇಗವಾಗಿ ಬಂದ ಲಾರಿ ಕಾರಿಗೆ ಡಿಕ್ಕಿ ಹೊಡೆದಿದೆ. ಚಾಲಕ ಮಧು ಸ್ಥಳದಲ್ಲೇ ಮೃತಪಟ್ಟರೆ ಗಂಭೀರ ಗಾಯಗೊಂಡಿದ್ದ ಜವರಯ್ಯ ಆಸ್ಪತ್ರೆಗೆ ಕರೆತರುತ್ತಿದ್ದಾಗ ಮಾರ್ಗ ಮಧ್ಯೆ ಉಸಿರು ಚೆಲ್ಲಿದ್ದಾರೆ. ಮಧು ಅವರ ಪತ್ನಿ ಗೀತಾಗೆ ಚನ್ನರಾಯಪಟ್ಟಣ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಲಾರಿ ಚಾಲಕ ನಿಲ್ಲಿಸದೆ ಎಸ್ಕೇಪ್ ಆಗಿದ್ದಾನೆ.

ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ.

ಸೋಲಿನ ಭೀತಿಯಲ್ಲಿ ಬಿಜೆಪಿ: ಸಿಎಂ ಸಿದ್ದರಾಮಯ್ಯ

■ ಕಾಯಕಯೋಗಿ ಸುದ್ದಿ

ಬೆಂಗಳೂರು: ಲೋಕಸಭೆ ಚುನಾವಣೆಯಲ್ಲಿ ಸೋಲಿನ ಭೀತಿಯಲ್ಲಿರುವ ಭಾರತೀಯ ಜನತಾ ಪಕ್ಷವು ಐಟಿ, ಇಡಿ, ಸಿಬಿಐ ಮೊದಲಾದ ಸ್ವಾಯತ್ತ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ಕಾಂಗ್ರೆಸ್ ಪಕ್ಷವನ್ನು ಹಣಿಯಲು ಹೊರಟಿದೆ. ಈ ಹುನ್ನಾರದ ಭಾಗವಾಗಿಯೇ ನಮ್ಮ ಪಕ್ಷದ ವಿರುದ್ಧ 'ತೆರಿಗೆ ಭಯೋತ್ಪಾದನೆ'ಯಲ್ಲಿ ತೊಡಗಿದೆ. ಈ ರೀತಿ ನಮ್ಮ ಪಕ್ಷವನ್ನು ದುರ್ಬಲಗೊಳಿಸಿ ಚುನಾವಣೆಯಲ್ಲಿ ಗೆಲುವು ಸಾಧಿಸಬಹುದೆಂದು ಬಿಜೆಪಿ ತಿಳಿದುಕೊಂಡಿದ್ದರೆ ಅದು ಆ ಪಕ್ಷದ ಭ್ರಮೆ ಎಂದು ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಸಿಎಂ, ಕಾಂಗ್ರೆಸ್ ಪಕ್ಷದ ಮೇಲೆ ವರಮಾನ ತೆರಿಗೆ ಪಾವತಿ ಮಾಡದೆ ಇರುವ ಆರೋಪ ಹೊರಿಸಿ 1823 ಕೋಟಿ ರೂ. ಪಾವತಿಸುವಂತೆ ಐಟಿ ಇಲಾಖೆ ನೋಟಿಸ್ ನೀಡಿದೆ. 2017–18ರಲ್ಲಿ ಬಿಜೆಪಿ ಹೆಸರೇ ಇಲ್ಲದ 92 ದಾನಿಗಳಿಂದ 4.5 ಲಕ್ಷ ರೂ. ಮತ್ತು ವಿಳಾಸವೇ ಇಲ್ಲದ 1297 ದಾನಿಗಳಿಂದ 42 ಕೋಟಿ ರೂ. ದೇಣಿಗೆ ಪಡೆದಿರುವುದನ್ನು ನಮ್ಮ ಪಕ್ಷದ ನಾಯಕರು ಬಯಲಿಗೆಳೆದಿದ್ದಾರೆ. ನಮ್ಮ ಪಕ್ಷಕ್ಕೆ ಅನ್ವಯಿಸಿದ ಮಾನದಂಡವನ್ನೇ ಅನ್ವಯಿಸಿದರೆ ಬಿಜೆಪಿ ಕಳೆದ ಏಳು ವರ್ಷಗಳಲ್ಲಿ ನಡೆಸಿರುವ ತೆರಿಗೆ ಉಲ್ಲಂಘನೆಗಾಗಿ 4263 ಕೋಟಿ ರೂ. ಪಾವತಿಸಬೇಕಾಗಿದೆ ಎಂದು ತಿಳಿಸಿದ್ದಾರೆ.

ಚುನಾವಣೆ ಘೋಷಣೆಯಾಗುತ್ತಿದ್ದಂತೆ ಅತಿಕ್ರಿಯಾಶೀಲ ಆಗಿರುವ ಐಟ ಇಲಾಖೆ ಟಿಎಂಸಿ, ಸಿಪಿಐ ಸೇರಿದಂತೆ ವಿರೋಧ ಪಕ್ಷಗಳ ಮೇಲೆಯೂ ತೆರಿಗೆ ಭಯೋತ್ಪಾದನೆಯ ಅಸ್ತ್ರ ಪ್ರಯೋಗ ಮಾಡಿದೆ. ವಿರೋಧ ಪಕ್ಷಗಳ ಮೇಲೆ ಮುಗಿಬಿದ್ದಿರುವ ಐಟ ಇಲಾಖೆ, ಬಿಜೆಪಿಯ ತೆರಿಗೆ ಉಲ್ಲಂಘನೆ ಬಗ್ಗೆ ಮಾತ್ರ ಕುರುಡಾಗಿದೆ. ಐಟ ಇಲಾಖೆಯ ಕಣ್ಣಿಗೆ ಬಟ್ಟೆ ಕಟ್ಟಿರುವವರು ಯಾರು ಎನ್ನುವುದನ್ನು ತಿಳಿಯದಷ್ಟು ದೇಶದ ಜನತೆ ದಡ್ಡರಲ್ಲ ಎಂದಿದ್ದಾರೆ.

ಕಾಂಗ್ರೆಸ್ ಪಕ್ಷದ ಕೆಲವು ನಾಯಕರ ಡೈರಿಗಳೆಂದು ಹೇಳಲಾದ ದಾಖಲೆ ಪತ್ರಗಳನ್ನು ಮುಂದಿಟ್ಟುಕೊಂಡು ತೆರಿಗೆ ಉಲ್ಲಂಘನೆಯ ಆರೋಪ ಮಾಡುತ್ತಿರುವ ಐಟ ಇಲಾಖೆಗೆ, ಕರ್ನಾಟಕದಲ್ಲಿಯೇ ಬಂಧಿಸಲ್ಪಟ್ಟಿದ್ದ ಯಡಿಯೂರಪ್ಪ ಡೈರಿಗಳಾಗಲಿ, ನರೇಂದ್ರ



ಮೋದಿಯವರೂ ಫಲಾನುಭವಿ ಎಂದು ಆರೋಪಿಸಲಾಗಿರುವ 'ಬಿರ್ಲಾ–ಸಹಾರಾ' ಡೈರಿಯಾಗಲಿ ಯಾಕೆ ಕಣ್ಣಿಗೆ ಬಿದ್ದಿಲ್ಲ? ಎಂದು ಪ್ರಶ್ನಿಸಿದ್ದಾರೆ.

ಐಟಿ, ಇಡಿ ಮತ್ತು ಸಿಬಿಐ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ಚುನಾವಣಾ ಬಾಂಡ್‌ಗಳ ಮೂಲಕ ಸಾವಿರಾರು ಕೋಟಿ ರೂಪಾಯಿಗಳನ್ನು ಆಡಳಿತಾರೂಢ ಬಿಜೆಪಿ ಸುರಿಗೆ ಮಾಡಿರುವುದು ಜಗಜ್ಜಾಹೀರಾಗಿದೆ. ಬಯಲಾಗಿರುವ ಈ ಹಗರಣದಿಂದ ಜನರ ಗಮನ ಬೇರೆ ಕಡೆ ಸೆಳೆಯುವ ಜೊತೆಯಲ್ಲಿ ವಿರೋಧ ಪಕ್ಷಗಳನ್ನೂ ಅಪರಾಧಿ ಸ್ಥಾನದಲ್ಲಿ ನಿಲ್ಲಿಸುವ ದುರುದ್ದೇಶದಿಂದಲೇ ಬಿಜೆಪಿ ಸರ್ಕಾರ ವರಮಾನ ತೆರಿಗೆ ವಂಚನೆಯ ಸುಳ್ಳು ಆರೋಪಗಳನ್ನು ಮಾಡುತ್ತಿದೆ ಎಂದು ಕಿಡಿ ಕಾರಿದ್ದಾರೆ.

ಕಳೆದ ಐದು ವರ್ಷಗಳ ಅವಧಿಯಲ್ಲಿ ವಿಜಯ್ ಮಲ್ಯ ನೀರವ್ ಮೋದಿ ಮೊದಲಾದ ಬ್ಯಾಂಕ್ ವಂಚಕರ 10.09 ಲಕ್ಷ ಕೋಟಿ ರೂಪಾಯಿಯಷ್ಟು ಬ್ಯಾಂಕ್ ಸಾಲವನ್ನು ಮನ್ನಾ ಮಾಡಿರುವ ಬಿಜೆಪಿ ಸರ್ಕಾರ ಅವರಿಂದ ಪಡೆದಿರುವ ಕಮಿಷನ್ ಹಣ ಎಷ್ಟು ಎನ್ನುವುದನ್ನು ದೇಶದ ಜನತೆಗೆ ತಿಳಿಸಬೇಕಾಗುತ್ತದೆ. ಕಾಂಗ್ರೆಸ್ ಪಕ್ಷದ ನಿಜವಾದ ಶಕ್ತಿ ಹಣ ಬಲ ಅಲ್ಲ, ಜನ ಬಲ. ಬಿಜೆಪಿಯಲ್ಲಿ ಹಣ ಬಲ ಇದ್ದರೆ ನಮ್ಮಲ್ಲಿ ಜನ ಬಲ ಇದೆ. ತೆರಿಗೆ ವಂಚಕರು, ಬ್ಯಾಂಕ್ಗಳನ್ನು ಮುಳುಗಿಸಿದವರು, ಗಣಿ ಲೂಟಿಕೋರರು, ಕಾಳಸಂತೆಕೋರರು, ಕಳ್ಳ–ಖದೀಮರೇ ಬಿಜೆಪಿಯ ಬಲ ಎಂದು ಆರೋಪಿಸಿದ್ದಾರೆ.

ಬಿಜೆಪಿ ಅಂದ್ರೆ ಭ್ರಷ್ಟರ ಹಣವನ್ನು ನುಂಗಿ ಅವರಿಗೆ ಪ್ರಾಮಾಣಿಕತೆಯ ಸರ್ಟಿಫಿಕೇಟ್ ನೀಡುವ ವಾಷಿಂಗ್ ಮಷಿನ್ ಆಗಿದೆ. ಭ್ರಷ್ಟರು ತಾವು ಮಾಡಿದ ಮಹಾಪಾಪಗಳ ಮೇಲಿನ ತನಿಖೆಯಿಂದ ತಪ್ಪಿಸಿಕೊಳ್ಳಬೇಕಾದರೆ, ಶಿಕ್ಷೆಯಿಂದ ಪಾರಾಗಬೇಕಾದರೆ ಬಿಜೆಪಿ ಸೇರಿಕೊಂಡರೆ ಸಾಕು, ಪಾಪಗಳೆಲ್ಲವೂ ತನ್ನಿಂತಾನೆ ಶುದ್ಧವಾಗುತ್ತವೆ. ಅಲ್ಲಿದ್ದುಕೊಂಡು ಎಷ್ಟು ಬೇಕಾದರೂ ಭ್ರಷ್ಟಾಚಾರ ಮಾಡಬಹುದು, ಜನರ ಹಣ ಲೂಟಿ ಮಾಡಬಹುದು. ಅವರ ಮೇಲೆ ಯಾವ ಕೇಸೂ ದಾಖಲಾಗುವುದಿಲ್ಲ. ಯಾವ ತನಿಖಾ ಸಂಸ್ಥೆಯೂ ಹುಡುಕಿಕೊಂಡು ಬರುವುದಿಲ್ಲ ಎಂದು ಸಿದ್ದರಾಮಯ್ಯ ಟೀಕಿಸಿದ್ದಾರೆ.

ಬಿಜೆಪಿ ಅಧಿಕಾರಕ್ಕೆ ಬರುವುದು ಮತ್ತು ಅಧಿಕಾರವನ್ನು ಉಳಿಸಿಕೊಂಡಿದ್ದೇ ಇಂತಹ ಕಳ್ಳ–ಖದೀಮರ ಲೂಟಿಯ ಹಣದಿಂದ. ಇದಕ್ಕೆ ಉತ್ತಮ ಉದಾಹರಣೆ ಕರ್ನಾಟಕದಲ್ಲಿ ನಡೆಸುತ್ತಾ ಬಂದ ಆಪರೇಷನ್ ಕಮಲ. 400 ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ಎದೆ ತಟ್ಟಿಕೊಳ್ಳುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರು ವಿರೋಧ ಪಕ್ಷಗಳನ್ನು ಹಣಿಯಲು ಈ ರೀತಿಯ ಅಕ್ರಮ ಕೃತ್ಯಗಳಿಗೆ ಇಳಿದಿರುವುದನ್ನು ನೋಡಿದರೆ ಅವರಿಗೆ ಗೋಡೆ ಮೇಲಿನ ಬರಹ ಸ್ಪಷ್ಟವಾಗಿ ಕಾಣ ತೊಡಗಿದೆ ಎಂದರ್ಥ ಎಂದು ವ್ಯಾಗ್ಯ ನಡೆಸಿದ್ದಾರೆ.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಿಂದ ಕೆ.ಆರ್.ಎಸ್ ಪಕ್ಷದ ಅಭ್ಯರ್ಥಿಯಾಗಿ ಸುಬ್ರಮಣಿ.ಜೆ ಸ್ಪರ್ಧೆ

■ ಕಾಯಕಯೋಗಿ ಸುದ್ದಿ

ದೇವನಹಳ್ಳಿ :ಕರ್ನಾಟಕ ರಾಷ್ಟ್ರಸಮಿತಿ ಪಕ್ಷವು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಕ್ಕೆ ನನ್ನನ್ನು ಆಯ್ಕೆ ಮಾಡಿದೆ ಪಕ್ಷದ ಸಂಘಟನೆ ಮತ್ತು ಹೋರಾಟಗಳಲ್ಲಿ ನಿರಂತರವಾಗಿ ಪಾಲ್ಗೊಳ್ಳುತಿರುವುದನ್ನು ಪರಿಗಣಿಸಿ ನನಗೆ ಅವಕಾಶ ನೀಡಿದೆ ನನ್ನನ್ನು ಆಯ್ಕೆ ಮಾಡಿದ ಪಕ್ಷದ ವರಿಷ್ಠರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಕೆ.ಆರ್.ಎಸ್. ಪಕ್ಷದ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಸುಬ್ರಮಣಿ.ಜಿ ತಿಳಿಸಿದರು.



ಪಟ್ಟಣದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಪಕ್ಷ ನನಗೆ ಅವಕಾಶ ಕಲ್ಪಿಸಿದ್ದು ಜಿಲ್ಲೆಯಾದ್ಯಂತ ಸಂಚರಿಸಿ ಪ್ರಾದೇಶಿಕ ಪಕ್ಷಕ್ಕೆ ಬೆಂಬಲಿಸುವಂತೆ ಮತದಾರರಲ್ಲಿ ಮನವಿ ಮಾಡುತ್ತೇನೆ ಎಂದರು.

ಕೆ.ಆರ್.ಎಸ್. ಪಕ್ಷದ ಜಿಲ್ಲಾಧ್ಯಕ್ಷ ವೆಂಕಟೇಶ್‌ಮೂರ್ತಿ ಮಾತನಾಡಿ ನಮ್ಮ ಪಕ್ಷ ಬ್ರಷ್ಟಾಚಾರದ ವಿರುದ್ಧ ಹೋರಾಟ ಮಾಡುತ್ತಾ ಬಂದಿದೆ. ನಮ್ಮ ಹೋರಾಟ ಬಡವರ ಪರವಾಗಿರುತ್ತದೆ. ಹಾಗೂ ನಮ್ಮ ಸ್ವಂತ ಖರ್ಚಿನಲ್ಲೇ ನಾವು ಹೋರಾಟಗಳನ್ನು ಮಾಡುತ್ತಾ ಸಾರ್ವಜನಿಕರಿಗೆ ಅನುಕೂಲ ಮಾಡುತ್ತಾ ಬಂದಿದ್ದೇವೆ ನಮ್ಮದು ಪ್ರಾದೇಶಿಕ ಪಕ್ಷವಾಗಿದ್ದು ನಮ್ಮ ಪಕ್ಷದ ಅಭ್ಯರ್ಥಿಯನ್ನು ಮತದಾರರು ಬೆಂಬಲಿಸುತ್ತಾರೆಂದರು.

ಕೆ.ಆರ್.ಎಸ್ ಪಕ್ಷದ ಉಪಾಧ್ಯಕ್ಷ ಶಿವಶಂಕರ್ ಮಾತನಾಡಿ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ನಮ್ಮ ಪಕ್ಷದಿಂದ ಈಗಾಗಲೇ 24 ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಘೋಷಣೆ ಮಾಡಲಾಗಿದೆ. ಉಳಿದ 4 ಕ್ಷೇತ್ರಗಳಲ್ಲೂ ಅಭ್ಯರ್ಥಿಗಳನ್ನು ಘೋಷಣೆಯಾಗಲಿದೆ. ರಾಜ್ಯದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳು ಮೈತ್ರಿ ಮಾಡಿಕೊಂಡಿದ್ದು ಕೆ.ಆರ್.ಎಸ್. ಪಕ್ಷ ಒಂದೇ ಪ್ರಾದೇಶಿಕ ಪಕ್ಷವಾಗಿದೆ. ರಾಷ್ಟ್ರೀಯ ಪಕ್ಷಗಳಿಗೆ ಪರ್ಯಾಯವಾಗಿ ಕೆ.ಆರ್.ಎಸ್ ಪಕ್ಷ ಸ್ಪರ್ಧಿಸುತ್ತಿದೆ. ನಮ್ಮ ಪಕ್ಷ ಯಾವುದೇ ಆಸೆ ಆಮಿಷಗಳನ್ನು ನೀರಿಕ್ಷಿಸದೆ ಎಲ್ಲಾ ಇಲಾಖೆಗಳಲ್ಲಿ ನಡೆಯುವ ಭ್ರಷ್ಟಾಚಾರವನ್ನು ನಿಲ್ಲಿಸಿದೆ. ಹಾಗೂ ಜನರಲ್ಲಿ ಜಾಗೃತಿ ಮೂಡಿಸಲಾಗಿದೆ ಎಂದರು. ಇದೆ ವೇಳೆ ಕೆ.ಆರ್.ಎಸ್ ಪಕ್ಷದ ರಾಜ್ಯ ಯುವ ಘಟಕದ ಪ್ರಧಾನ ಕಾರ್ಯದರ್ಶಿ ನಿಖಿಲ್. ಯಲುಹಂಕ ಅಧ್ಯಕ್ಷ ಸತೀಶ್, ಕೆ.ಆರ್.ಎಸ್.ಪಕ್ಷದ ಕಾರ್ಯಕರ್ತರು ಮುಖಂಡರು ಇದ್ದರು.

ಲೋಕಜಂಗಮ ಮಹಾಮಹಿಮ

ಕನ್ನಡ ನಾಡಿನ ಕೋಟ್ಯಾಂತರ ಮಕ್ಕಳ ಭವಿಷ್ಯವನ್ನು ರೂಪಿಸಿ ಅವರಲ್ಲೇ ಶಿವಸಾನಿಧ್ಯವನ್ನು ಕಂಡುಂಡ ನಡೆದಾಡಿದ ದೇವಮಾನವ, ಕರ್ನಾಟಕ ರತ್ನ, ಪದ್ಮಭೂಷಣ, ತ್ರಿವಿಧದಾಸೋಹಮೂರ್ತಿ ಪರಮಪೂಜ್ಯ ಡಾ.ಶ್ರೀಶ್ರೀಶ್ರೀ ಶಿವಕುಮಾರಮಹಾಶಿವ ಯೋಗಿಗಳು ಭೌತಿಕವಾಗಿ ನಮ್ಮೊಂದಿಗಿಲ್ಲವಾದರೂ ಅವರ ಆದರ್ಶಗಳು ನಡೆನುಡಿ ಇಡೀ ವಿಶ್ವಕ್ಕೆ ಮಾದರಿಯಾಗಿದೆ.

21–01–2019ರಂದು ಲಿಂಗೈಕ್ಯರಾದ ನಮ್ಮ ಬುದ್ಧಿಯವರ ಶಿವಾತ್ಮ ಎಲ್ಲೆಡೆ ಇದೆ. ಚೈತನ್ಯಭರಿತವಾಗಿದೆ. ನಮ್ಮ ಜೊತ್ತಜರನ್ನು ನೆನೆಯುವುದೇ ಮಹಾಪುಣ್ಯ.

ಕಳೆದ ಶತಮಾನದಲ್ಲಿ ಮಾಗಡಿ ತಾಲ್ಲೂಕಿನ ವೀರಾಪುರದಲ್ಲಿ ಶಿವಶರಣ ದಂಪತಿಗಳಾದ ಲಿಂ.ಹುನ್ನೇಗೌಡ ಗಂಗಮ್ಮನವರ ಪುಣ್ಯ ಗರ್ಭಾಂಬುದಿಯಲ್ಲಿ 1.4.1908ರಂದು 13ನೆಯ ಕೊನೆಯ ಮಗನಾಗಿ ಜನಿಸಿದ ಶಿಶುವು ಶ್ರೀ ಸಿದ್ಧಗಂಗಾಮಠದ ಪೀಠಾಧ್ಯಕ್ಷರಾಗಿ ಇಡೀ ವಿಶ್ವವೇ ಶ್ರೀಮಠದತ್ತ ತಿರುಗಿ ನೋಡುವಂತಹ ತ್ರಿವಿಧ ದಾಸೋಹ ನಡೆಸಿದ್ದು ಇದೀಗ ಸುವರ್ಣಾಕ್ಷರಗಳಲ್ಲಿ ಬರೆದಿಡುವ ಇತಿಹಾಸವಾಗಿದೆ.



ಪ್ರತಿನಿತ್ಯ ಶ್ರೀಮಠದಲ್ಲಿ ಸಹಸ್ರಾರು ಸಂಖ್ಯೆಯ ವಿದ್ಯಾರ್ಥಿಗಳು, ಯಾತ್ರಾರ್ಥಿಗಳು, ಪ್ರವಾಸಿಗರಿಗೆ ನಡೆಯುವ 'ದಾಸೋಹ' ಸೇವೆ ಮತ್ತಾವ ಕ್ಷೇತ್ರದಲ್ಲೂ ಕಾಣಸಿಗುವುದಿಲ್ಲ.

ಪರಮಪೂಜ್ಯರಿಗೆ ನೂರಾರು ಪ್ರಶಸ್ತಿಗಳು ಬಂದಿದ್ದರೂ ಜನ ನೀಡಿದ 'ನಡೆದಾಡುವ ದೇವರು' ಗೌರವ ಕೋಟಿಕೋಟಿ ಕನ್ನಡಿಗರ ಭಕ್ತಿಯ ಪ್ರತೀಕವಾಗಿದೆ.

12ನೇ ಶತಮಾನದ ವಿಶ್ವಗುರು ಬಸವಣ್ಣನವರ 'ಕಳಬೇಡ ಕೊಲಬೇಡ'...'ಇವನಾರವ ಇವನಾರವನೆಂದೆನಿಸದಿರಯ್ಯ' ತತ್ವವನ್ನು 21ನೇ ಶತಮಾನದಲ್ಲಿ ಚಾಚೂತಪ್ಪದೆ ಅನುಷ್ಠಾನಗೊಳಿಸಿದ ಮಹಾಶಿವಯೋಗಿ ಸಿದ್ಧಗಂಗಾಶ್ರೀಗಳು ಮಕ್ಕಳಿಗೆ ದಾಸೋಹ, ಶಿಕ್ಷಣ, ಆಸರೆ, ಜ್ಞಾನದ ಜ್ಯೋತಿಯಾಗಿ ಲೋಕಕಲ್ಯಾಣಕ್ಕೆ ದುಡಿದ ಮಹಾಚೇತನ.

ಜಾತಿಭೇದ ಎಣಿಸದೆ ಧರ್ಮದ ಸಂಕೋಲೆಗೆ ಸಿಲುಕದೆ ಶರಣಮಾರ್ಗದಲ್ಲಿ ನಡೆದ ಪೂಜ್ಯರು ಎಲ್ಲಾ ಮಠಾಧೀಶರಿಗೆ ಆದರ್ಶಮಯವಾಗಿದ್ದಾರೆ.

ಮಾಜಿ ಪ್ರಧಾನಿ ವಾಜಪೇಯಿಯವರ 'ಉತ್ತರದಲ್ಲಿ ಗಂಗೆ, ದಕ್ಷಿಣದಲ್ಲಿ ಸಿದ್ಧಗಂಗೆ' ಎಂಬ ಮಾತಿನಂತೆ ಜ್ಞಾನಗಂಗೆಯಾಗಿ ಸಿದ್ಧಗಂಗೆ ಲಕ್ಷಾಂತರ ಮಕ್ಕಳ ಬಾಳಿಗೆ ಕಲ್ಪವೃಕ್ಷವೂ ಆಗಿದೆ. ಕಾಮಧೇನುವೂ ಆಗಿದೆ.

ಒಂದು ವರ್ಗಕ್ಕೆ ಸೀಮಿತವಾಗಿದ್ದ ಸಂಸ್ಕೃತವನ್ನು ಎಲ್ಲಾ ಜಾತಿ, ಧರ್ಮದ ಮಕ್ಕಳು ಅಧ್ಯಯನಮಾಡಬೇಕೆಂಬ ಪೂಜ್ಯರ ಆಶಯದಂತೆ ಇಡೀ ರಾಷ್ಟ್ರದಲ್ಲಿಯೇ ಹತ್ತು ಸಾವಿರ ಮಕ್ಕಳು ಸಂಸ್ಕೃತ ಕಲಿಯುವ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ.

ಇಂತಹ ಮಹಾಶಿವಯೋಗಿಗಳನ್ನು ಕುರಿತು ಡಾ.ಸಿದ್ಧಯ್ಯ ಪುರಾಣಿಕ ಹೀಗೆ ಚಿತ್ರಿಸಿದ್ದರೆ. ಸಿದ್ಧಗಂಗಾಶ್ರೀಗಳು ಸರ್ವಾಂಗಲಿಂಗಿಗಳು. ಇವರಲ್ಲಿ ಯಾವುದನ್ನು ಮೆಚ್ಚುವುದೆಂದು ದಿಗ್ಮೂಢಮೆಯಾಗುತ್ತದೆ. ನಿಶ್ಚಿತ ಜ್ಞಾನವನವನೇ? ನಿರ್ಮಲ ಕ್ರಿಯೆಯನ್ನೇ? ಉಜ್ವಲ ವೈರಾಗ್ಯವನ್ನೇ? ಶಮದುಮಾದಿ ದೈವಿ ಸಂಪತ್ತನ್ನೇ? ಬಹುಭಾಷಾ ಪಾರಂಗತಿಯನ್ನೇ? ಪವಿತ್ರ ಜೀವನವನ್ನೇ? ಸಕಲಜೀವಾರಾಶಿಗಳನ್ನೂ ತನ್ನ ತೆಕ್ಕೆಯಲ್ಲಿ ಒಳಗೊಳ್ಳುವ ಅಪಾರ ಅನುಕಂಪವನ್ನೇ? ಬೆಕ್ಕಸ ಬೆರಗುಗೊಳಿಸುವ ಶಿಕ್ಷಣ ಸಂಸ್ಥೆಗಳ ಸಂಸ್ಥಾಪನೆಯನ್ನೇ? ಪಂಡಿತ ಪಾಮರರಿಬ್ಬರನ್ನೂ ಏಕಪ್ರಕಾರವಾಗಿ ಮೆಚ್ಚಿಸುವ ಮಾತುಗಾರಿಕೆಯನ್ನೇ? ವೈಜ್ಞಾನಿಕ ದೃಷ್ಟಿಯನ್ನೇ? ರಾಷ್ಟ್ರನಿರ್ಮಾಣ ಕಾರ್ಯದ ದುರಂಧರತೆಯನ್ನೇ? ದೀನಬಂಧುತ್ವವನ್ನೇ? ಸ್ಥಧರ್ಮನಿಷ್ಠೆ ಪರಧರ್ಮ ಸಹಿಷ್ಣತೆಯನ್ನೇ? ಕವಿ, ಕಲಾವಿದ, ವಿದ್ವಾಂಸರಿಗೆ ನಿರಂತರ ನೀಡುತ್ತಿರುವ ಆಶ್ರಯವನ್ನೇ?

ಸಂಘಟನಾ ಶಕ್ತಿಯನ್ನೇ? ಎಷ್ಟುಜನ ಬಂದು ಕಾಡಿ ಬೇಡಿದರೂ, ಎಂಥ ವಿಘ್ನಗಳು ಎದುರಾದರೂ, ಎಳ್ಳಷ್ಟೂ ಬೇಡರು, ಮುನಿಸು ದಣಿವುಗಳನ್ನು ತೋರದೆ ಸದಾ ಸುಪ್ರಸನ್ನ ವದ